MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 219 | ಶನಿವಾರ : 14-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 219 | SATURDAY : 14-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ದೇಶದಲ್ಲಿ ಕರ್ನಾಟಕವನ್ನು ನಂ.1 ಉತ್ಪಾದನಾ ವಲಯದ ಗುರಿ: ಎಂ.ಬಿ.ಪಾಟೀಲ್



**ಬೆಂಗಳೂರು,ಜೂ.13–** ಕರ್ನಾಟಕವನ್ನು ದೇಶದಲ್ಲೆ ನಂ.1 ಉತ್ಪಾದನಾ ವಲಯವನ್ನಾಗಿ ಅಭಿವೃದ್ಧಿಪಡಿಸಲು ಹಲವು ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ತಮ ಇಲಾಖೆಯ 2 ವರ್ಷಗಳ ಸಾಧನೆ ಹಾಗೂ ಭವಿಷ್ಯದ ಪಥ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಯೆಟ್ನಾಂ ಹಾಗೂ ಇತರ ದೇಶಗಳಂತೆ ಕರ್ನಾಟಕದಲ್ಲೂ ಉತ್ಪಾದನಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

ಈಗ ನಾಲ್ಕನೇ ಸ್ಥಾನದಲ್ಲಿರುವ ರಾಜ್ಯವನ್ನು ಮೊದಲ ಸ್ಥಾನಕ್ಕೆ ಕೊಂಡೊಯ್ಯಲು ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಶ್ರೀನಿವಾಸಪುರದಲ್ಲಿ ಫಾರ್ಮ ಪಾರ್ಕ್, ವಿಜಯಪುರದಲ್ಲಿ ಎಲೆಕ್ಟ್ರಿಕಲ್ ಸೆಲ್ ಉತ್ಪಾದನೆ, ಚಿತ್ರದುರ್ಗದಲ್ಲಿ ಡ್ರೋನ್ ಪಾರ್ಕ್, ಹುಬ್ಬಳ್ಳಿಯಲ್ಲಿ ನವೋದ್ಯಮ ಹಾಗೂ ಭವಿಷ್ಯದ ತಾಂತ್ರಿಕ ಅಭಿವೃದ್ಧಿ, ದಾಬಸ್‌ಪೇಟೆ–ದೊಡ್ಡಬಳ್ಳಾಪುರ ನಡುವೆ ಆರೋಗ್ಯ, ಶಿಕ್ಷಣ ಸೇವೆಗಳ ಮೂಲಕ ಕ್ಲೀನ್ ಸಿಟಿ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯ ಕಡೆ ವಿಶೇಷ ಪಾರ್ಕ್ 2ನೇಪುಟಕ್ಕೆ

## ಭಾರತಮಾಲಾ ರಸ್ತೆ ಕಾಮಗಾರಿ ವೀಕ್ಷಣೆ ಮಾಡಿದ ಸಂಸದ ಜಿ.ಕುಮಾರ ನಾಯಕ್


ಯುವ ಮಾರ್ಗ ಸುದ್ದಿ



**ರಾಯಚೂರು, ಜೂ. 13–** ಸಂಸದ ಜಿ. ಕುಮಾರ ನಾಯಕ್ ಅವರು ಶುಕ್ರವಾರ ರಾಯಚೂರು ಜಿಲ್ಲೆಯ ಮೂಲಕ ಹಾದುಹೋಗುವ ಮಹತ್ವದ ಚೆನ್ನೈ–ಸೂರತ್ ಭಾರತ್ ಮಾಲಾ ರಸ್ತೆಯ ಕಾಮಗಾರಿಯನ್ನು ವೀಕ್ಷಿಸಿದರು. ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಿದ ಸಂಸದರು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಈ ಸಂದರ್ಭದಲ್ಲಿ, ಪ್ರಾಧಿಕಾರದ ಕ್ಯಾಂಪ್‌ಗೆ ಭೇಟಿ ನೀಡಿ, ನಡೆಯುತ್ತಿರುವ ಕಾಮಗಾರಿಯ ಗುಣಮಟ್ಟವನ್ನು ಕೂಲಂಕುಷವಾಗಿ ಪರಿಶೀಲಿಸಿದರು. ರಸ್ತೆ ಕಾಮಗಾರಿಯು 2ನೇಪುಟಕ್ಕೆ

## ಗ್ರಾಮೀಣ ವಿದ್ಯಾರ್ಥಿಗಳಿಗೆ ಬಸ್ ಸೌಕರ್ಯಕ್ಕಾಗಿ ಸಿಸಿಎಫ್‌ಎಫ್ ಸದಸ್ಯರ ಮನವಿ




ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.13–** 2025–26ರ ಶೈಕ್ಷಣಿಕ ವರ್ಷ ಪ್ರಾರಂಭವಾಗಿದ್ದು, ಪೋತ್ನಾಳ್ ಸಮೀಪದ ಪೋತ್ನಾಳ್ ಮತ್ತು ಚಿಕ್ಕಕೊಟ್ನೇಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಜಾಗೀರಪನ್ನೂರು, ದೇವಿಪುರ, ಖರಾಬದಿನ್ನಿ, ಮುದ್ದಮಗುಡ್ಡಿ, ಜೀನೂರು, ಜೀನೂರು ಕ್ಯಾಂಪ್, ಮತ್ತು ಈರಲಗಡ್ಡಿ ಗ್ರಾಮಗಳ ವಿದ್ಯಾರ್ಥಿಗಳಿಗೆ ಶಾಲಾ–ಕಾಲೇಜುಗಳಿಗೆ ತೆರಳಲು ಬಸ್ ವ್ಯವಸ್ಥೆಯ ಕೊರತೆಯಿದೆ. ಇದರಿಂದಾಗಿ ಗ್ರಾಮೀಣ ಭಾಗದ ಮಕ್ಕಳು, ವಿಶೇಷವಾಗಿ ಹೆಣ್ಣುಮಕ್ಕಳು, ಶಾಲೆಯಿಂದ ಹೊರಗುಳಿದು ಕೆಲಸಕ್ಕೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮ ಅಭಿವೃದ್ಧಿ ಸಮಿತಿಯ ಸದಸ್ಯರು ಅಳಲು ತೋಡಿಕೊಂಡಿದ್ದಾರೆ.

ಸರ್ಕಾರವು ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಾಗೂ ಮಕ್ಕಳಿಗೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಹೇಳಿಕೆ ನೀಡುತ್ತಿದೆಯಾದರೂ, ಗ್ರಾಮೀಣ ಭಾಗದ ಮಕ್ಕಳು ಬಸ್ ಸೌಕರ್ಯ ಮತ್ತು ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದಾರೆ. ಇದರ ಪರಿಣಾಮವಾಗಿ ಬಾಲ್ಯವಿವಾಹ ಮತ್ತು ಬಾಲಕಾರ್ಮಿಕ ಪದ್ಧತಿಗಳು ಹೆಚ್ಚಾಗುತ್ತಿವೆ ಎಂದು ಪೋತ್ನಾಳ್ ಪಂಚಾಯತಿ ಮಟ್ಟದ ಸದಸ್ಯರು ಕಳವಳ ವ್ಯಕ್ತಪಡಿಸಿದ್ದಾರೆ.

ಸಿಸಿಎಫ್‌ಎಫ್ ಸದಸ್ಯರು 2ನೇ ಪುಟಕ್ಕೆ

## ಹದಗೆಟ್ಟ ರಸ್ತೆಗಳ ದುರಸ್ತಿ, ಕಂಬಗಳಿಗೆ ಲೈಟ್ ಹಾಕಲು ಕರವೇ ಒತ್ತಾಯ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಜೂ.13–**ಪಟ್ಟಣದಲ್ಲಿ ಹದಗೆಟ್ಟಿರುವ ರಸ್ತೆಗಳ ದುರಸ್ತಿ ಮಾಡಬೇಕು ಮತ್ತು ಕತ್ತಲಲ್ಲಿರುವ ಕಂಬಗಳಿಗೆ ಲೈಟ್ ಅಳವಡಿಸಲು ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪುರಸಭೆ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ನಿರಂತರ ಮಳೆಯಿಂದ ವಿವಿಧ ವಾರ್ಡಗಳ ರಸ್ತೆಗಳು ಕಿತ್ತಿ ಹೋಗಿವೆ. ತೆಗ್ಗು, ಗುಂಡಿ ಬಿದ್ದ ಪರಿಣಾಮ ರಸ್ತೆಗಳು ಹೊಂಡಗಳಾಗಿ ಮಾರ್ಪಟ್ಟಿವೆ. ಪರಿಣಾಮ ವಾಹನ ಸವಾರರು ರಸ್ತೆಯಲ್ಲಿ ಓಡಾಡಲು ತೀರ್ವ ಪರದಾಡುವಂತಾಗಿದೆ. ಅಲ್ಲದೇ, ವಿದ್ಯುತ್ ಕಂಬಗಳಿಗೆ ಅಳವಡಿಸಿರುವ ಲೈಟ್ ಗಳು ಹತ್ತದೇ ವಾರ್ಡಗಳು ಕಟ್ಟಲೆಯಾಗಿವೆ. ಇದರಿಂದ ಕಳ್ಳತನ ಪ್ರಕರಣಗಳು ಹೆಚ್ಚುತ್ತಿವೆ. ಕೂಡಲೇ ಪುರಸಭೆ ಇತ್ತ ಗಮನ ಹರಿಸಿ, ಸಮಸ್ಯೆ ಬಗೆಹರಿಸಬೇಕು. ಇಲ್ಲವಾದಲ್ಲಿ ಪುರಸಭೆ ಮುಂದೆ ಧರಣಿ ಕೂಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ಆಂಜನೇಯ ಭಂಡಾರಿ, ಭೀಮೇಶ್ ಎಲ್. ನಾಯಕ, ಮೌನೇಶ್ ಬುಳ್ಳಾಪುರ, ಸಿದ್ದು ಚಲುವಾದಿ, ಕುರುಮೇಶ್ ನಾಯಕ, ಶಿವು ಪತ್ತಾರ್, ಭೀಮೇಶ್ ಆರ್. ನಾಯಕ, ಅಶೋಕ್ ನಾಯಕ ಸೇರಿದಂತೆ ಇದ್ದರು.

## ವಿವಿಧ ಬೇಡಿಕೆಗಳ ಈಡೇರಿಕೆಗೆ ವಕೀಲರ ಸಂಘ ಒತ್ತಾಯ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜೂ.13–** ವಿವಿಧ ಬೇಡಿಕೆಗಳು ಈಡೇರಿಸಬೇಕೆಂದು ಒತ್ತಾಯಿಸಿ ತಾಲೂಕ ನ್ಯಾಯವಾದಿಗಳ ಸಂಘದಿಂದ ಅಧ್ಯಕ್ಷ ಭೂಪನಗೌಡ ಪಾಟೀಲ್ ಕರಡಕಲ್ ನೇತೃತ್ವದಲ್ಲಿ ವಕೀಲರು ಸಹಾಯಕ ಆಯುಕ್ತರ ಕಚೇರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು. ಅಖಿಲ ಭಾರತ ವಕೀಲರ ಒಕ್ಕೂಟದಿಂದ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರು, ಹೆಸರಾಂತ ಕಾನೂನು ತಜ್ಞರು, ಪಂಡಿತರು ದೇಶದಲ್ಲಿ ವಕೀಲರು ನ್ಯಾಯದ ಘನರೆ ಎತ್ತಿ ಹಿಡಿಯಲು ಹಾಗೂ ವಕೀಲರು ಎದುರಿಸುತ್ತಿರುವ ಸಮಸ್ಯೆ ಸವಾಲುಗಳ ಕುರಿತು ವಿಸ್ತೃತ ಚರ್ಚೆ ನಡೆಸಿ, ಪೊಲೀಸರು ಅತೀರೇಖದ ಏಕಪಕ್ಷಿಯ ವರ್ತನೆಯಿಂದ ರಕ್ಷಣೆ ಹಾಗೂ ವಕೀಲರು ಸಂರಕ್ಷಣೆ ಕಾಯ್ದೆ ಸೂಕ್ತ ತಿದ್ದುಪಡಿ ಮಾಡಿ, ಸರ್ವೋಚ್ಚ ಹಾಗೂ ಉಚ್ಚ ನ್ಯಾಯಾಲದ ಮಾರ್ಗಸೂಚಿಗಳ ಪಾಲನೆ ಮಾಡಬೇಕು, ಬಾರ್ ಪರೀಕ್ಷೆಗಳ ರದ್ದು ಮಾಡಬೇಕು, ಕಿರಿಯ ವಕೀಲರಿಗೆ ಮಾಸಿಕ ಸಹಾಯ ಧನ ನೀಡಬೇಕು, ರಾಜ್ಯದ ಎಲ್ಲಾ ತಾಲೂಕ ವಕೀಲರ ಸಂಘಕ್ಕೆ 5 ಲಕ್ಷ, ಜಿಲ್ಲಾ ಸಂಘಕ್ಕೆ 10 ಲಕ್ಷ ಅನುದಾನ ನೀಡಬೇಕು, ರಾಜ್ಯ ಸರ್ಕಾರ ವಕೀಲರಿಗೆ ಕಡ್ಡಾಯವಾಗಿ ಜೀವವಿಮೆ, 2ನೇ ಪುಟಕ್ಕೆ

## ಉಮಾಮಹೇಶ್ವರಿ ಮಹಾವಿದ್ಯಾಲಯಕ್ಕೆ ಪರೀಕ್ಷಾ ವಿಚಕ್ಷಣ ದಳ ಭೇಟಿ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಜೂ.13–** ವಿಜಯಪುರ ಅಕ್ಕಮಹಾದೇವಿ ವಿಶ್ವವಿದ್ಯಾಲಯದ ಅದಿನದಲ್ಲಿ ಬರುವ ಶ್ರೀ ಉಮಾಮಹೇಶ್ವರಿ ಪದವಿ ಮಹಾವಿದ್ಯಾಲಯಕ್ಕೆ ರಾಯಚೂರು ಜಿಲ್ಲೆಯ ಪರೀಕ್ಷಾ ವಿಚಕ್ಷಣ ದಳವು ಶುಕ್ರವಾರ ಭೇಟಿ ನೀಡಿ ಪರಿಶೀಲಿಸಿತು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಟ್ಟಿರುವ ರಾಯಚೂರು ಜಿಲ್ಲೆಯಲ್ಲಿ ಬರುವ ಲಿಂಗಸಗೂರು,ಹಟ್ಟಿ ದೇವದುರ್ಗ, ರಾಯಚೂರು, ಮಸ್ಕಿ,ಸಿಂಧನೂರು ಮಹಿಳಾ ಪದವಿ ಕಾಲೇಜುಗಳಲ್ಲಿ ಆರಂಭವಾಗಿರುವ ಸ್ನಾತಕ ಪದವಿ ಪರೀಕ್ಷಾ ಕೇಂದ್ರಗಳಿಗೆ ಮಹಿಳಾ ವಿಶ್ವವಿದ್ಯಾನಿಲಯದ ರಾಯಚೂರು ಜಿಲ್ಲೆಯ ಪರೀಕ್ಷಾ ವಿಚಕ್ಷಣ ದಳದ ಅಧ್ಯಕ್ಷರಾದ ಪ್ರೊ.ಎಸ್. ಆರ್ ಸಾಹು ಹಾಗೂ ಮಹಿಳಾ ಅಧಿಕಾರಿಗಳಾದ ಡಾ. ರೇಣುಕಾರೆಡ್ಡಿ, ಪ್ರೊ. ಲಕ್ಷ್ಮಿ ಹೆಬ್ಬಾಳ ಭೇಟಿ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರೊ.ಎಸ್.ಆರ್ ಸಾಹು ರಾಯಚೂರು ಜಿಲ್ಲೆಯಲ್ಲಿ ಬರುವ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿದಾಗ ವಿದ್ಯಾರ್ಥಿಗಳು ನಕಲು ಮಾಡದೆ ಸುಸೂತ್ರವಾಗಿ ಪರೀಕ್ಷೆ ಬರೆಯುತ್ತಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ, ಸಿ ಸಿ ಕ್ಯಾಮೆರಾ ಅಳವಡಿಕೆ ಮಾಡಿರುವುದು ಪರೀಕ್ಷೆಯ ನೈಜತೆಯನ್ನು ತೊರಿಸುತ್ತದೆ.ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ ಇಲ್ಲಿಯವರೆಗೆ ಯಾವುದೆ ತಾಂತ್ರಿಕ ತೊಂದರೆ ಇಲ್ಲದೆ ಪರೀಕ್ಷೆಗಳು ಸುಗಮವಾಗಿ ನಡೆದಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಅಧೀಕ್ಷಕ ಜಿ ಮಂಜುನಾಥ್, ಮತ್ತು ಸಹ ಆಡಳಿತ ಅಧಿಕಾರಿ ಅಮರೇಶ್ ತೋರಣದಿನ್ನಿ ಹಾಗೂ ಪರೀಕ್ಷಾ ಸಿಬ್ಬಂದಿಗಳು ಇದ್ದರು.

## ಮಾನ್ವಿ: ವಕೀಲರ ಸಂರಕ್ಷಣೆ ಕಾಯ್ದೆ ತಿದ್ದುಪಡಿಗೆ ಆಗ್ರಹ



ಯುವ ಮಾರ್ಗ ಸುದ್ದಿ

**ಮಾನ್ವಿ,ಜೂ.13–**ಅಖಿಲ ಭಾರತ ವಕೀಲರ ಒಕ್ಕೂಟದ ತಾಲ್ಲೂಕು ಘಟಕವು ಶುಕ್ರವಾರ ತಹಸೀಲ್ದಾರ್ ಕಚೇರಿಯಲ್ಲಿ ಗ್ರೇಡ್–2 ತಹಸೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮನವಿ ಸಲ್ಲಿಸಿದೆ.

ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರ ಪಾಟೀಲ್ ಮಾತನಾಡಿ, ಪೊಲೀಸರ ಏಕಪಕ್ಷೀಯ ವರ್ತನೆಗಳಿಂದ ವಕೀಲರಿಗೆ ರಕ್ಷಣೆ ನೀಡಬೇಕು ಮತ್ತು ವಕೀಲರ ಸಂರಕ್ಷಣೆ ಕಾಯ್ದೆ–2024ಕ್ಕೆ ಸೂಕ್ತ ತಿದ್ದುಪಡಿ ಯಾಗಬೇಕು ಎಂದು ಆಗ್ರಹಿಸಿದರು. ಸರ್ವೋಚ್ಚ ನ್ಯಾಯಾಲಯ ಮತ್ತು ಉಚ್ಚ ನ್ಯಾಯಾಲಯದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಜೊತೆಗೆ, ಅವೈಜ್ಞಾನಿಕವಾಗಿರುವ ಅಖಿಲ ಭಾರತ ಬಾರ್ ಪರೀಕ್ಷೆಯನ್ನು ರದ್ದುಪಡಿಸಬೇಕು ಎಂದು ಅವರು ಮನವಿಯಲ್ಲಿ ತಿಳಿಸಿದರು.

ವಕೀಲರ ಕಲ್ಯಾಣಕ್ಕಾಗಿ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟ ಪಾಟೀಲ್, ಕಿರಿಯ ವಕೀಲರಿಗೆ 2 ವರ್ಷಗಳ ಕಾಲ ಮಾಸಿಕ ರೂ.10 ಸಾವಿರ ಸಹಾಯಧನ ನೀಡಬೇಕು ಎಂದು ಒತ್ತಾಯಿಸಿದರು. ಅಲ್ಲದೆ, ರಾಜ್ಯದಲ್ಲಿನ ಎಲ್ಲಾ ಜಿಲ್ಲಾ ವಕೀಲರ ಸಂಘಕ್ಕೆ ವರ್ಷಕ್ಕೆ ರೂ.10 ಲಕ್ಷ ಹಾಗೂ ತಾಲ್ಲೂಕು ವಕೀಲರ ಸಂಘಗಳಿಗೆ ರೂ.5 ಲಕ್ಷ ಅನುದಾನ ನೀಡುವಂತೆ ಮನವಿ ಮಾಡಿದರು. ರಾಜ್ಯ ಸರ್ಕಾರದಿಂದ ವಕೀಲರಿಗೆ ವೈದ್ಯಕೀಯ ಮತ್ತು ಜೀವ ವಿಮಾ ಸೌಲಭ್ಯ ಒದಗಿಸಬೇಕು, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ವಕೀಲರ ಅಕಾಡೆಮಿಗಳನ್ನು ಸ್ಥಾಪಿಸಬೇಕು ಎಂದು ಅವರು ಹೇಳಿದರು.

ಹೆಚ್ಚುವರಿ ನ್ಯಾಯಾಲಯಗಳ ಸ್ಥಾಪನೆ ಮತ್ತು ಮೂಲಭೂತ ಸೌಲಭ್ಯಗಳ ಬೇಡಿಕೆ ಕುರಿತು ಮಾತನಾಡಿದ ಪಾಟೀಲ್, ರಾಜ್ಯದಲ್ಲಿ ಹೆಚ್ಚುವರಿ ನ್ಯಾಯಾಲಯಗಳನ್ನು ಸ್ಥಾಪಿಸಬೇಕು ಮತ್ತು ನ್ಯಾಯಾಲಯಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು. ವಕೀಲರಿಗೆ ಪ್ರತ್ಯೇಕ ಚೇಂಬರ್‌ಗಳನ್ನು ಸ್ಥಾಪಿಸಬೇಕು ಎಂದೂ ಅವರು ಆಗ್ರಹಿಸಿದರು. ಕಂದಾಯ 2ನೇ ಪುಟಕ್ಕೆ

## ಮೊದಲನೇಯ ಪುಟದಿಂದ

# ದೇಶದಲ್ಲಿ ಕರ್ನಾಟಕವನ್ನು ನಂ.1 ಉತ್ಪಾದನಾ ವಲಯದ ಗುರಿ: ಎಂ.ಬಿ.ಪಾಟೀಲ್

ಸೇರಿದಂತೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಹುಬ್ಬಳ್ಳಿಯ ಎನ್‌ಜಿಎಫ್ ಅನ್ನು ಪುನರುಜ್ಜಿ?ವನ ಗೊಳಿಸಲಾಗುವುದು. ಎಂಎಸ್‌ಐಎಲ್‌ನ ಚಿಟ್ ಫಂಡ್ ವಹಿವಾಟನ್ನು 5 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.

ಮೈಸೂರು ಸ್ಯಾಂಡಲ್‌ನ ಕೆಎಸ್‌ಡಿ ಸಿಎಲ್ ವಹಿವಾಟು ಈ ತಿಂಗಳಿನಲ್ಲಿ 180 ಕೋಟಿ ರೂ. ದಾಟಿದ್ದು ಐತಿಹಾಸಿಕ ದಾಖಲೆಯಾಗಿದೆ. ಒಟ್ಟು ವಹಿವಾಟನ್ನು ಮುಂದಿನ 3 ವರ್ಷದಲ್ಲಿ 5 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸುವ ಗುರಿ ಇದೆ ಎಂದರು. ಬಂಡವಾಳ ಹೂಡಿಕೆಯಲ್ಲಿ ಗಣನೀಯ ಸಾಧನೆಯಾಗಿದೆ. 115 ಒಡಂಬಡಿಕೆಗಳಿಂದ 6,58,660 ಕೋಟಿ ರೂ. ಹೂಡಿಕೆಯಾಗಿದ್ದು, 2,32,771 ಕೋಟಿ ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಇದೆ. ಏಕಗವಾಕ್ಷಿ ಅನುಮೋದನಾ ಸಮಿತಿ 1,13,200 ಕೋಟಿ ರೂ. ಹೂಡಿಕೆಯ 906 ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿದ್ದು, 2,23,982 ಉದ್ಯೋ?ಗಗಳು ಸೃಷ್ಟಿಯಾಗುತ್ತವೆ. ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ 3,550 ಉದ್ಯೋ?ಗಿಗಳು ಭಾಗವಹಿಸಿದ್ದು, 6,23,957 ಕೋಟಿ ರೂ.ಗಳ ಹೂಡಿಕೆಗೆ ಒಪ್ಪಂದ ಮಾಡಿಕೊಳ್ಳ ಲಾಗಿದೆ. ಅದರಲ್ಲಿ 4.03 ಲಕ್ಷ ಕೋಟಿ ರೂ. ಹೂಡಿಕೆಗೆ ಅನುಮೋದನೆ ನೀಡಲಾಗಿದೆ. ಇದರಲ್ಲಿ ಶೇ.75 ರಷ್ಟು ಬೆಂಗಳೂರಿನ ಹೊರವಲಯದಲ್ಲಿದ್ದು, ಶೇ.45 ರಷ್ಟು ಉತ್ತರ ಕರ್ನಾಟಕ ಭಾಗದಲ್ಲಿ ಹೂಡಿಕೆಯಾಗುತ್ತದೆ ಎಂದರು.

ಬಂಡವಾಳ ಹೂಡಿಕೆದಾರರಿಗೆ ಉದ್ಯೋಗ ಸೃಷ್ಟಿ, ಹೂಡಿಕೆ, ಪರಿಸರ ಸ್ನೇ?ಹಿ ಕ್ರಮಗಳನ್ನು ಆಧರಿಸಿ ವಿವಿಧ ರಿಯಾಯಿತಿ ಹಾಗೂ ಸೌಲಭ್ಯಗಳನ್ನು ನೀಡಲಾಗುತ್ತದೆ. ಕೈಗಾರಿಕಾ ಪ್ರದೇಶಗಳಿಗೆ ಸಮರ್ಪಕ ನೀರಿನ ವ್ಯವಸ್ಥೆಗಾಗಿ 3,600 ಕೋಟಿ ರೂ. ವೆಚ್ಚ ಮಾಡಲಾಗುತ್ತದೆ. 18 ಪ್ರದೇಶಗಳಲ್ಲಿ 44,165 ಎಕರೆಯಲ್ಲಿ ವಿಶೇಷ ಹೂಡಿಕೆ ವಲಯಗಳನ್ನು ಸ್ಥಾಪಿಸಲಾಗುತ್ತದೆ ಎಂದು ಹೇಳಿದರು. ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಮೂರನೇ ಸ್ಥಾನದಿಂದ ಕರ್ನಾಟಕ, 2024-25ನೇ ಸಾಲಿನಲ್ಲಿ 56 ಸಾವಿರ ಕೋಟಿ ರೂ. ಹೂಡಿಕೆಯೊಂದಿಗೆ 2ನೇ ಸ್ಥಾನಕ್ಕೇರಿದೆ. 1,65,545 ಮಿಲಿಯನ್ ಡಾಲರ್ ರಫ್ತಿನೊಂದಿಗೆ ದೇಶದಲ್ಲಿ ಪ್ರಥಮ ಸ್ಥಾನದಲ್ಲಿದ್ದೇವೆ ಎಂದು ವಿವರಿಸಿದರು.

# ಭಾರತಮಾಲಾ ರಸ್ತೆ ಕಾಮಗಾರಿ ವೀಕ್ಷಣೆ ಮಾಡಿದ ಸಂಸದ ಜಿ.ಕುಮಾರ ನಾಯಕ್

ಉತ್ತಮ ಗುಣಮಟ್ಟದಿಂದ ಕೂಡಿರಬೇಕು ಮತ್ತು ಆದಷ್ಟು ಬೇಗ ಪೂರ್ಣಗೊಳ್ಳಬೇಕು ಎಂದು ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಲ್ಲದೆ, ರಸ್ತೆಯಲ್ಲಿ ಈಗಾಗಲೇ ಕಂಡುಬಂದಿರುವ ಬಿರುಕುಗಳನ್ನು ತಕ್ಷಣವೇ ಸರಿಪಡಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನೆ ನಿರ್ದೇಶಕರಿಗೆ ಸೂಚಿಸಿದರು.

ಭಾರತ್ ಮಾಲಾ ಯೋಜನೆಯ ಪ್ಯಾಕೇಜ್-3 ಮತ್ತು 4 ತಮ್ಮ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವುದರಿಂದ, ಈ ಕಾಮಗಾರಿಯು ಅತ್ಯಂತ ಗುಣಮಟ್ಟದಿಂದ ಕೂಡಿರಬೇಕು ಎಂದು ಸಂಸದ ಕುಮಾರ ನಾಯಕ್ ಅವರು ಪುನರುಚ್ಚರಿಸಿದರು.

ಈ ಸಂದರ್ಭದಲ್ಲಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನೆ ನಿರ್ದೇಶಕರಾದ ಭಾವನೇಶ್ ಕುಮಾರ್, ಪ್ರಾಧಿಕಾರದ ಸಿಬ್ಬಂದಿಗಳಾದ ಮಂಜುನಾಥ್ ಸೇರಿದಂತೆ ಅನೇಕ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

# ಗ್ರಾಮೀಣ ವಿದ್ಯಾರ್ಥಿಗಳಿಗೆ ಬಸ್ ಸೌಕರ್ಯಕ್ಕಾಗಿ ಸಿಸಿಎಫ್‌ಎಫ್ ಸದಸ್ಯರ ಮನವಿ

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿದ್ದು, ಸಂಬಂಧಪಟ್ಟ ಇಲಾಖೆಗಳು ಮತ್ತು ಸರ್ಕಾರ ಈ ಸಮಸ್ಯೆಗಳನ್ನು ಗಮನಿಸಿ ಸೂಕ್ತ ಪರಿಹಾರ ಕಂಡುಕೊಳ್ಳುವ ಮೂಲಕ ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ನೆರವಾಗಬೇಕು ಎಂದು ಒತ್ತಾಯಿಸಿದ್ದಾರೆ. ಒಂದು ವಾರದೊಳಗೆ ಈ ಸಮಸ್ಯೆಯನ್ನು ಬಗೆಹರಿಸಿ ಮಕ್ಕಳು ಶಾಲೆಗೆ ಹೋಗಲು ಅನುವು ಮಾಡಿಕೊಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಹಕ್ಕೊತ್ತಾಯ ನೀಡಿದ್ದಾರೆ.

ಈ ಸಂದರ್ಭದಲ್ಲಿ ಯಂಕೋಬ ನಾಯಕ, ಯಂಕೋಬ್ ದಳಪತಿ, ಮಹಾದೇವಪ್ಪ, ಭಾಗ್ಯಮ್ಮ, ಪ್ರೇಮಾ, ಹನುಮಂತ, ನರಸರೆಡ್ಡಿ, ಅಮರಗುಂಡಪ್ಪ, ರಾಮಕೃಷ್ಣ ಸೇರಿದಂತೆ ಅಅಈಈ ಸದಸ್ಯರು ಮತ್ತು ಇತರರು ಉಪಸ್ಥಿತರಿದ್ದರು.

# ವಿವಿಧ ಬೇಡಿಕೆಗಳ ಈಡೇರಿಕೆಗೆ ವಕೀಲರ ಸಂಘ ಒತ್ತಾಯ

ವೈದ್ಯಕೀಯ ಸೌಲತ್ತು ಒದಗಿಸಬೇಕು, ಜಿಲ್ಲೆಗಳಲ್ಲಿ ವಕೀಲರ ಅಕಾಡೆಮಿ ಸ್ಥಾಪನೆ ಮಾಡಬೇಕು, ರಾಜ್ಯದಲ್ಲಿ ಹೆಚ್ಚುವರಿ ನ್ಯಾಯಾಲಯ ಸ್ಥಾಪಿಸಿ ಈಗಿರು ನ್ಯಾಯಾಲಯಗಳಿಗೆ ಮೂಲ ಸೌಕರ್ಯ ಒದಗಿಸಬೇಕು, ನ್ಯಾಯಾಲಯಗಳಲ್ಲಿ ವಕೀಲರಿಗೆ ಚೆಂಬರ್ ಸ್ಥಾಪನೆ, ಕಂದಾಯ ಪ್ರಕರಣಗಳು ಸಿವಿಲ್ ನ್ಯಾಯಾಲಯಗಳಿಗೆ ವರ್ಗಾಯಿಸಬೇಕು ಇದರಿಂದ ಅನಗತ್ಯ ಒತ್ತಡ ಕಡಿಮೆ ಆಗುತ್ತದೆ. ವಕೀಲರಿಗೆ ಟೋಲ್ ಉಚಿತ ಒದಗಿಸಬೇಕು, ಜಿಲ್ಲೆಗೊಂದು ಸರ್ಕಾರಿ ಕಾನೂನು ಕಾಲೇಜು ಸ್ಥಾಪನೆ ಮಾಡಿ ಈಗಿರುವ ಖಾಸಗಿ ಕಾನೂನು ಕಾಲೇಜುಗಳಲ್ಲಿನ ಶುಲ್ಕ ನಿಯಂತ್ರಣ ಮಾಡಬೇಕು, ರಾಜ್ಯ ವಕೀಲಯರ ಪರಿಷತ್ತಿನ ಕಚೇರಿ ವಿಭಾಗದ ಮಟ್ಟದಲ್ಲಿ ಸ್ಥಾಪನೆ ಮಾಡಬೇಕು, ಪರಿಷತ್ತಿನ ಚುನಾವಣೆಯಲ್ಲಿ ಮಹಿಳೆಯರಿಗೆ 33ರಷ್ಟು ಮೀಸಲಾತಿಯ ಜೊತೆಗೆ ಪರಿಶೀಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರಿಗೆ ಮೀಸಲಾತಿ ಅನುಸಾರ ಪ್ರಾತಿನಿಧ್ಯ ನೀಡಬೇಕು ಕೂಡಲೇ ಸರ್ಕಾರಗಳು ಬೇಡಿಕೆಗಳ ಈಡೇರಿಕೆಗೆ ತುರ್ತು ಕ್ರಮ ವಹಿಸಬೇಕು ನಿರ್ಲಕ್ಷ ವಹಿಸಿದರೆ ವಕೀಲರ ಸಂಘದಿಂದ ವಿಧಾನಸೌಧದ ವರೆಗೂ ಹೋರಾಟ ವಿಸ್ತರಣೆ ಮಾಡುವುದಾಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಅಖಿಲ ಭಾರತ ವಕೀಲರ ಒಕ್ಕೂಟದ ಸದಸ್ಯ, ಹಿರಿಯ ನ್ಯಾಯವಾದಿ ನಾಗರಾಜ ಮಸ್ಕಿ, ನ್ಯಾಯವಾದಿ ಲಿಂಗರಾಜ್, ಜುನ್ಯೆದ್ ಬಿ. ನ್ಯಾಯವಾದಿಗಳಾದ ನಾಗರಾಜ ಗಸ್ತಿ, ಪಂಪಾತಿ, ಆದೇಶ, ಪ್ರಭು ಮುದಗಲ್ ಅನೇಕ ವಕೀಲರು ಸೇರಿದಂತೆ ಇದ್ದರು.

# ಮಾನ್ವಿ: ವಕೀಲರ ಸಂರಕ್ಷಣೆ ಕಾಯ್ದೆ ತಿದ್ದುಪಡಿಗೆ ಆಗ್ರಹ

ಇಲಾಖೆಯ ಜಿಲ್ಲಾಧಿಕಾರಿಗಳು ಮತ್ತು ಉಪವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ನಡೆಯುವ ಕಂದಾಯ ಪ್ರಕರಣಗಳಲ್ಲಿ ಒತ್ತಡದಿಂದಾಗಿ ಪಕ್ಷಿದಾರರಿಗೆ ನ್ಯಾಯ ದೊರೆಯದೆ ಇರುವುದರಿಂದ, ಕಂದಾಯ ಪ್ರಕರಣಗಳನ್ನು ಸಿವಿಲ್ ನ್ಯಾಯಾಲಯಗಳಿಗೆ ವರ್ಗಾಯಿಸಬೇಕು ಎಂಬ ಮಹತ್ವದ ಬೇಡಿಕೆಯನ್ನು ಮುಂದಿಟ್ಟರು.

ಇದೇ ವೇಳೆ, ವಕೀಲರಿಗೆ ಟೋಲ್ ಶುಲ್ಕ ರಹಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕು, ರಾಜ್ಯದಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ ಸರ್ಕಾರಿ ಕಾನೂನು ಕಾಲೇಜುಗಳನ್ನು ಸ್ಥಾಪಿಸಬೇಕು ಎಂದು ವಕೀಲರ ಒಕ್ಕೂಟ ಮನವಿ ಮಾಡಿದೆ. ಅನುದಾನಿತ ಮತ್ತು ಖಾಸಗಿ ಕಾನೂನು ಕಾಲೇಜುಗಳ ಶುಲ್ಕವನ್ನು ಸರ್ಕಾರ ನಿಯಂತ್ರಣ ಮಾಡಬೇಕು ಹಾಗೂ ಸರ್ಕಾರಿ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದೂ ಅವರು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಕಚೇರಿಯನ್ನು ವಿಭಾಗೀಯ ಮಟ್ಟದಲ್ಲಿ ಸ್ಥಾಪಿಸಬೇಕು, ವಕೀಲರ ಸಂಘದ ಮತ್ತು ಪರಿಷತ್ತಿನ ಚುನಾವಣೆಯಲ್ಲಿ ಮಹಿಳಾ ವಕೀಲರಿಗೆ ಶೇ.33ರಷ್ಟು ಮೀಸಲಾತಿ ನೀಡಬೇಕು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರಿಗೆ ಮೀಸಲಾತಿ ಅನುಸಾರ ಪ್ರಾತಿನಿಧ್ಯ ನೀಡಬೇಕು ಎಂದು ಪಾಟೀಲ್ ಮನವಿ ಮಾಡಿದರು. ಈ ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ವಕೀಲರಾದ ಮಲ್ಲಿಕಾರ್ಜುನ ಪಾಟೀಲ್, ಚನ್ನಬಸವನಾಯಕ, ಮನೋಹರ್ ವಿಶ್ವಕರ್ಮ, ವಿಶ್ವನಾಥ, ಸೈಯದ್ ತನ್ವೀರ್, ಹನುಮಂತಪ್ಪ ದೇವಿಪುರ, ಯಲ್ಲಪ್ಪ ಬಾದರದಿನ್ನಿ, ಹನುಮಂತರಾಯ ಕಪ್ಪಗಲ್, ದತ್ತಾತ್ರೇಯ ಹಿರೇಕೊಟ್ನೆಕಲ್, ಹನಮೇಶ ನಾಯಕ ಜೀನೂರು, ಸಾಬಣ್ಣ ನಂದಿಹಾಳ, ಶ್ರೀನಿವಾಸ ನಂದಿಹಾಳ, ಹನುಮಂತ ಬ್ಯಾಗವಾಟ್, ಮಲ್ಲೇಶ ಮಾಚನೂರ ಸೇರಿದಂತೆ ಅನೇಕ ವಕೀಲರು ಉಪಸ್ಥಿತರಿದ್ದರು.

# ಬಸ್ ನಿಲ್ದಾಣ ಪರಿಶೀಲನೆ



**ಗದಗ,ಜೂ.13–** ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಅವರ ನೇತೃತ್ವದಲ್ಲಿ ಸಮಿತಿ ಸದಸ್ಯರು ಗುರುವಾರ ನಗರದ ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ವ್ಯವಸ್ಥೆಯ ಪರಿಶೀಲನೆ ನಡೆಸಿದರು.

ಮೊದಲು ಬಸ್ ನಿಲ್ದಾಣದ ಆವರಣವನ್ನು ಪರಿಶೀಲನೆ ನಡೆಸಿದ ಅವರು ನಿಲ್ದಾಣದ ಸ್ವಚ್ಛತೆಗೆ ಗಮನ ಹರಿಸಬೇಕು. ಇದೇ ಜೂನ್ 20ಕ್ಕೆ ಪುನ: ಬಸ್‌ನಿಲ್ದಾಣಕ್ಕೆ ಸ್ವಚ್ಛತೆಯ ಪರಿಶೀಲನೆಗಾಗಿ ಆಗಮಿಸುವೆ. ಆ ಸಂದರ್ಭದಲ್ಲಿ ನಿಲ್ದಾಣ ಆವರಣ ಶುಚಿಯಾಗಿರಬೇಕು. ನಿಲ್ದಾಣದಲ್ಲಿನ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸುವಂತೆ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

**ಶೌಚಾಲಯ ವೀಕ್ಷಣೆ :** ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ ಅಲ್ಲಿಯೂ ಸಹ ಸ್ವಚ್ಛತೆ ಅಗತ್ಯವಾಗಿದೆ. ಅಲ್ಲದೇ ಸಾರ್ವಜನಿಕರಿಂದ ನಿಗದಿತ ಶುಲ್ಕ ಪಡೆದು ಸಾರ್ವಜನಿಕರಿಗೆ ಶೌಚಾಲಯ ಬಳಕೆಗೆ ದೊರೆಯಬೇಕು. ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು ಪುನ: ದೂರುಗಳು ಬರದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಗಾ ವಹಿಸಲು ಸೂಚಿಸಿದರು.

**ವಿಶ್ರಾಂತಿ ಕೊಠಡಿ :** ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಶುಭ್ರವಾಗಿರುವಂತೆ ನೋಡಿಕೊಳ್ಳಬೇಕು ಹಾಗೂ ಪ್ರತಿನಿತ್ಯ ವಿಶ್ರಾಂತಿ ಕೊಠಡಿಗೆ ಸಾರ್ವಜನಿಕರು ಆಗಮಿಸುವಂತೆ ಶುಚಿಯಾಗಿಟ್ಟುಕೊಳ್ಳಲು ಸಂಸ್ಥೆಯ ಅಧಿಕಾರಿಗಳಿಗೆ ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಜೂನ್ 20 ಕ್ಕೆ ಪುನ: ಪರಿಶೀಲನೆಗೆ ಆಗಮಿಸಲಾಗುವುದು. ಆ ಸಂದರ್ಭದಲ್ಲಿ ಇಂದು ನೀಡಿದ ಎಲ್ಲ ಸೂಚನೆಗಳು ಕಾರ್ಯರೂಪಕ್ಕೆ ಬಂದಿರಬೇಕು. ಇಲ್ಲವಾದಲ್ಲಿ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮಕ್ಕೆ ಆಗ್ರಹಿಸಲಾಗುವುದು ಎಂದರು.

**ಗ್ಯಾರಂಟಿ ಸಂವಾದ :** ನಿಲ್ದಾಣದ ಆವರಣದಲ್ಲಿನ ಮಹಿಳೆಯರೊಂದಿಗೆ ಹಾಗೂ ಗ್ಯಾರಂಟಿ ಫಲಾನುಭವಿಗ 'ಳೊಂದಿಗೆ ಸಂವಾದ ನಡೆಸಿದ ಸಮಿತಿ ಸದಸ್ಯರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಯಶಸ್ಸಿನ ಬಗ್ಗೆ ಅಭಿಪ್ರಾಯಗಳನ್ನು ಆಲಿಸಿದರು. ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿರುವುದು ಅಕ್ಷರಶ: ಸತ್ಯ. ಅದರಂತೆ ಸುಸ್ಥಿತ ಬದುಕಿಗಾಗಿ ಗೃಹಲಕ್ಷ್ಮೀ ಯೋಜನೆ, ಹಸಿವು ಮುಕ್ತ ಕರ್ನಾಟಕಕ್ಕೆ ಅನ್ನಭಾಗ್ಯ ಹಾಗೂ ಬಡವರ ಆಶಾಕಿರಣ ಗೃಹ ಜ್ಯೋತಿ, ನಿರುದ್ಯೋಗ ನಿವಾರಣೆಗೆ ಯುವನಿಧಿ ಸಹಕಾರಿಯಾಗಿವೆ ಎಂದು ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ ಮುಖ್ಯಮಂತ್ರಿ ಸಿದ್ದರಾಮಯ್ಯ , ಸಚಿವರಾದ ಎಚ್.ಕೆ.ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ನೀಲಮ್ಮ ಬೋಳನವರ, ಸದಸ್ಯರಾದ ಈಶ್ವರ ಹುಣಸಿಕಟ್ಟಿ, ಅಶೋಕ ಮಂದಾಲಿ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ನಿಂಗಪ್ಪ ದೇಸಾಯಿ, ಮುಲ್ಲಾ ಬಾರಕೇರ, ಸಂಗಮೇಶ ಹಾದಿಮನಿ, ಶಂಭು ಕಾಳೆ, ಗಣೇಶ ಮಿಟಾಯಿ, ಗಣ್ಯರಾದ ಚನ್ನಬಸಪ್ಪ ಅಕ್ಕಿ, ಅನಿಲ ಗರಗ, ಮೋಹನ ದೊಡ್ಡಬಂಡಿ, ಸಮೀರ ಉಪಸ್ಥಿತರಿದ್ದರು.

# 16 ರಿಂದ ಅತಿಸಾರ ಭೇದಿ ತಡೆಗೆ ಆಂದೋಲನ



**ಬಾಗಲಕೋಟ, ಜೂ. 13–** ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುವ ಅತಿಸಾರ ಭೇದಿ ತಡೆಗೆ ಜೂನ್ 16 ರಿಂದ ಜುಲೈ 31 ವರೆಗೆ ಆಂದೋಲನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಅತಿಸಾರಭೇದಿ ಮತ್ತು ದಡಾರ ಮತ್ತು ರುಬೆಲ್ಲ ನಿರ್ಮೂಲನೆ ಕುರಿತು ಜರುಗಿದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಹುಟ್ಟಿದ ಮಗುವಿನಿಂದ ಹಿಡಿದು 5 ವರ್ಷದೊಳಗಿನ ಮಕ್ಕಳಲ್ಲಿ ಕಂಡುಬರುತ್ತಿದ್ದು, ಯಾವುದೇ ಮಕ್ಕಳು ಇದರಿಂದ ಮರಣ ಹೊಂದದಂತೆ ಪರಿಣಾಮಕಾರಿ ಚಿಕಿತ್ಸೆಗೆ ಓಆರ್‌ಎಸ್ ಮತ್ತು ಝಿಂಕ್ ಮಾತ್ರೆ ವಿತರಣೆಗೆ ಕ್ರಮವಹಿಸಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪರಿಣಾಮಕಾರಿ ಚಿಕಿತ್ಸೆಗೆ ಓಆರ್‌ಎಸ್ ಮತ್ತು ಝಿಂಕ್ ಮಾತ್ರೆ ವಿತರಣೆ ಮಾಡಲಾಗುತ್ತಿದ್ದು, ಜಿಲ್ಲೆಯಲ್ಲಿ ಲಭ್ಯವಿರುವ 83185 ಓಆರ್‌ಎಸ್ ಮತ್ತು 652380 ಚಿಂಕ್ ಮಾತ್ರೆಗಳನ್ನು ಜಿಲ್ಲೆಯ ಆಯಾ ತಾಲೂಕಿನ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ವಿತರಣೆಗೆ ಕ್ರಮವಹಿಸಬೇಕು. ಇದರ ಜೊತೆಗೆ ಕುಡಿಯುವ ನೀರು ಶುಚಿತ್ವ ಇರಬೇಕು.

ಆಹಾರ ಸೇವನೆ ಮುಂಚೆ ಕೈಗಳನ್ನು ಸುಚಿಗೊಳಿಸಿಕೊಳ್ಳುವುದು ಮುಖ್ಯವಾಗಿದೆ. ಈ ಬಗ್ಗೆ ಹೆಚ್ಚಿನ ಪ್ರಮಾಣದಲ್ಲಿ ಶಾಲೆ, ಅಂಗನವಾಡಿ ಜನ ಸಮುದಾಯದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಿದರು.

ವಿಶ್ವ ಆರೋಗ್ಯ ಸಂಸ್ಥೆಯ ಸರ್ವೇಲೆನ್ಸ್ ಅಧಿಕಾರಿ ಮುಕುಂದ ಗಲಗಲಿ ದಡಾರ ಮತ್ತು ರುಬೆಲ್ಲಾ ನಿರ್ಮೂಲನೆ ಕುರಿತು ಮಾತನಾಡಿ ಎಂ.ಆರ್-1 ಮತ್ತು ಎಂ.ಆರ್-2 ಲಸಿಕಾ ವಂಚಿತ ಮಕ್ಕಳನ್ನು ಹುಡುಕಿ, ಅವರಿಗೆ ದಡಾರ ಮತ್ತು ರುಬೆಲ್ಲಾ ಲಸಿಕೆಯನ್ನು ಹಾಕಲಾಗುತ್ತದೆ. ಜ್ವರ ಮತ್ತು ಗಂಧೆ ಪ್ರಕರಣಗಳು ವರದಿಯಾಗಿದ್ದು, ಎಲ್ಲ ತಾಲೂಕಿನ ಪ್ರಕರಣಗಳ ವರದಿ ಮಾಡಲು ತಾಲೂಕಾ ಮಟ್ಟದ ಅಧಿಕರಿಗಳಿಗೆ ಸೂಚನೆ ನೀಡಿದರು. ಜಿಲ್ಲೆಯಲ್ಲಿ 46 ಸಂಶಯಾತ್ಮಕ ಪ್ರಕರಣಗಳಲ್ಲಿ 4 ಪ್ರಕರಣಗಳು ದೃಡಪಟ್ಟಿವೆ. ದೃಡಪಟ್ಟ ಪ್ರದೇಶಗಳಲ್ಲಿ ವಿಶೇಷ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೇನ್ನವರ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಕುಸುಮಾ ಮಾಗಿ, ಜಿಲ್ಲಾ ಆಯುಷ ಅಧಿಕಾರಿ ಡಾ.ಶೇಖರಯ್ಯ ಮಠ ಸೇರಿದಂತೆ ಆಯಾ ತಾಲೂಕಿನ ವೈದ್ಯಾಧಿಕಾರಿಗಳು ಉಪಸ್ಥಿರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

ಯುವ ಮಾರ್ಗ



# ವಿಮಾನ ದುರಂತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಪ್ರಧಾನಿ ಮೋದಿ



**ನವದೆಹಲಿ,ಜೂ.13–** ಗುಜರಾತ್‌ನ ಅಹಮದಬಾದ್‌ನ ಸರ್ದಾರ್ ವಲ್ಲಬಭಾಯಿ ವಿಮಾನ ನಿಲ್ದಾಣದ ಸಮೀಪದಲ್ಲೆ ಸಂಭವಿಸಿದ ವಿಮಾನ ಅಪಘಾತ ಘಟನಾ ಸ್ಥಳಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದರು. ಈ ವೇಳೆ ಅಧಿಕಾರಿಗಳಿಂದ ಘಟನೆ ಬಗ್ಗೆ ಮಾಹಿತಿ ಪಡೆದು, ಚರ್ಚಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಘಟನೆಯಲ್ಲಿ ಗಾಯಗೊಂಡಿರುವ ಗಾಯಾಳುಗಳು ಮತ್ತು ತಮ ಕುಟುಂಬದವರನ್ನು ಕಳೆದುಕೊಂಡ ಸಂತ್ರಸ್ಥರನ್ನು ಭೇಟಿಯಾಗಿ ಸಾಂತ್ವನ ಹೇಳಿದ ಮೋದಿಯವರು, ಕೇಂದ್ರ ಸರ್ಕಾರದಿಂದ ಎಲ್ಲಾ ರೀತಿಯ ನೆರವು ನೀಡುವ ಭರವಸೆಯನ್ನು ನೀಡಿದ್ದಾರೆ.

ಬೆಳಗ್ಗೆ ದೆಹಲಿಯಿಂದ ವಿಶೇಷ ವಿಮಾನದ ಮೂಲಕ ಅಹಮದಬಾದ್ ಗೆ ಆಗಮಿಸಿದ ಮೋದಿ ಅವರನ್ನು ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಕಿಂಜರಾಪು, ಕೇಂದ್ರ ಸಚಿವ ಮುರಳೀಧರ್ ಮೊಹೋಲ್ ಮತ್ತು ರಾಜ್ಯ ಗೃಹ ಸಚಿವ ಹರ್ಷ ಸಂಘವಿ ಸೇರಿದಂತೆ ಮತ್ತಿತರರು ಬರ ಮಾಡಿಕೊಂಡಿದ್ದರು. ಮೋದಿಯವರು ಇಲ್ಲಿನ ಸರ್ದಾರ್ ವಲ್ಲಭಭಾಯಿ ಪಟೇಲ್ ವಿಮಾನ ನಿಲ್ದಾಣಕ್ಕೆ ಆಗಮಿಸಿ ನೇರವಾಗಿ ಮೇಘನಿ ನಗರ ಪ್ರದೇಶದ ಅಪಘಾತದ ಸ್ಥಳಕ್ಕೆ ಕಾರಿನಲ್ಲಿ ಭೇಟಿ ನೀಡಿದರು.ದುರ್ಘಟನೆಯಲ್ಲಿ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುವನ್ನು ಮೋದಿಯವರು ಭೇಟಿ ಮಾಡಿ ಆರೋಗ್ಯ ವಿಚಾರಿಸಿದ್ದಾರೆ.

ಅಪಘಾತ ಸಂಭವಿಸಿದ ಬಳಿಕ ನಿರಂತರವಾಗಿ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದ ಪ್ರಧಾನಿ ಮೋದಿ ಅವರು, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರನ್ನು ತಕ್ಷಣ ಅಹಮದಾಬಾದ್‌ಗೆ ತೆರಳುವಂತೆ ಸೂಚನೆ ನೀಡಿದ್ದರು. ಇದಕ್ಕೂ ಮೊದಲು ಪ್ರಧಾನಿ ಮೋದಿ ಅವರು ಅಹಮದಾಬಾದ್ ಸಿವಿಲ್ ಆಸ್ಪತ್ರೆಗೆ ಭೇಟಿ ನೀಡಿ, ವಿಮಾನ ಡಿಕ್ಕಿ ಹೊಡೆದ ಪರಿಣಾಮ ಗಂಭೀರವಾಗಿ ಗಾಯಗೊಂಡಿರುವ ಹಾಸ್ಟೆಲ್ ವಿದ್ಯಾರ್ಥಿಗಳನ್ನು ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.

ವಿಮಾನ ನಿಲ್ದಾಣಕ್ಕೆ ಅಂಜಲಿ ರುಪಾನಿ ಭೇಟಿ: ಇನ್ನು ಏರ್ ಇಂಡಿಯಾ ವಿಮಾನ ಅಪಘಾತದಲ್ಲಿ ಮೃತಪಟ್ಟಿರುವ ಗುಜರಾತ್ ಮಾಜಿ ಮುಖ್ಯಮಂತ್ರಿ ವಿಜಯ್ ರುಪಾನಿ ಅವರ ಪತ್ನಿ ಅಂಜಲಿ ರುಪಾನಿ ಅವರು ಇಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ಅಪಘಾತ ಸ್ಥಳವನ್ನು ನೋಡಿ ಕಣ್ಣೀರಾದರು. ಇದೇ ವೇಳೆ ಏರ್ ಇಂಡಿಯಾ ವಿಮಾನ ಅಪಘಾತ ನಡೆದ ಸ್ಥಳಕ್ಕೆ ಬ್ರಿಟಿಷ್ ಹೈಕಮಿಷನ್ ಕಚೇರಿಯ ಹಿರಿಯ ಅಧಿಕಾರಿಗಳೂ ಭೇಟಿ ನೀಡಿದ್ದು, ಪರಿಶೀಲನೆ ನಡೆಸಿದ್ದಾರೆ. ಈ ದುರ್ಘಟನೆಯಲ್ಲಿ 53 ಬ್ರಿಟನ್ ಪ್ರಜೆಗಳು ಸಾವನ್ನಪ್ಪಿದ್ದಾರೆ ಎಂಬುದು ಇಲ್ಲಿ ಉಲ್ಲೇಖನೀಯ.

ಅಹಮದಾಬಾದ್‌ನಲ್ಲಿ ನಡೆದ ದುರಂತ ಘಟನೆಯ ನಂತರ, ಅಂತರರಾಷ್ಟ್ರೀಯ ನಾಗರಿಕ ವಿಮಾನಯಾನ ಸಂಸ್ಥೆ ನಿಗದಿಪಡಿಸಿರುವ ಅಂತರರಾಷ್ಟ್ರೀಯ ನಿಯಮಗಳಿಗೆ ಅನುಗುಣವಾಗಿ ವಿಮಾನ ಅಪಘಾತ ತನಿಖಾ ಬ್ಯೂರೋ (ಇದು ನಾಗರಿಕ ವಿಮಾನಯಾನ ಸಚಿವಾಲಯದ ಅಡಿಯಲ್ಲಿ ಸ್ವತಂತ್ರ ನಿಯಂತ್ರಕ ಸಂಸ್ಥೆಯಾಗಿದೆ) ಔಪಚಾರಿಕ ತನಿಖೆಯನ್ನು ಪ್ರಾರಂಭಿಸಿದೆ ಎಂದು ಸಾಮಾಜಿಕ ಜಾಲತಾಣ ನಲ್ಲಿ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಕಿಂಜರಾಪು ಅವರು ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ಹೆಚ್ಚುವರಿಯಾಗಿ, ದುರ್ಘಟನೆಯ ಕುರಿತು ವಿವರವಾಗಿ ಪರಿಶೀಲಿಸಲು ಸರ್ಕಾರ ಕೂಡ ಬಹು ವಿಭಾಗಗಳ ತಜ್ಞರನ್ನು ಒಳಗೊಂಡ ಉನ್ನತ ಮಟ್ಟದ ಸಮಿತಿಯನ್ನು ರಚಿಸುತ್ತಿದೆ ಎಂದು ತಿಳಿಸಿದ್ದಾರೆ. ವಿಮಾನ ದುರಂತ ಸಂಭವಿಸುತ್ತಿದ್ದಂತೆ ಪ್ರಧಾನಿ ಮೋದಿ ಟ್ವಿಟ್ ಮಾಡಿ ಆಘಾತ ಮತ್ತು ದುಃಖ ವ್ಯಕ್ತಪಡಿಸಿದ್ದರು. ಅಹಮದಾಬಾದ್‌ನಲ್ಲಿ ನಡೆದ ದುರಂತವು ನಮನ್ನು ದಿಗ್ಭ್ರಮೆಗೊಳಿಸಿದೆ ಮತ್ತು ದುಃಖಿಸಿದೆ. ಇದು ಪದಗಳಿಗೆ ಮೀರಿದ ಹೃದಯವಿದ್ರಾವಕವಾಗಿದೆ ಎಂದು ಹೇಳಿದ್ದಾರೆ.

ಟಾಟಾ ಗ್ರೂಪ್ ಅಪಘಾತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ತಲಾ 1 ಕೋಟಿ ರೂ. ಪರಿಹಾರ ಘೋಷಿಸಿದೆ. ಏರ್ ಇಂಡಿಯಾ ಮತ್ತು ಟಾಟಾ ಅಧ್ಯಕ್ಷ ಎನ್.ಚಂದ್ರಶೇಖರನ್ ಎಕ್‌ನಲ್ಲಿ ಈ ಬಗ್ಗೆ ಪೋಸ್ಟ್ ಮಾಡಿ, ಏರ್ ಇಂಡಿಯಾವು ಸಂತ್ರಸ್ತರ ಕುಟುಂಬಗಳ ಬೆಂಬಲಕ್ಕೆ ನಿಲ್ಲಲಿದೆ ಎಂದು ಭರವಸೆ ನೀಡಿದ್ದಾರೆ. ವಿಮಾನ ದುರಂತ ಘಟನೆಯ ಬಳಿಕ ವಿಮಾನ ನಿಲ್ದಾಣದಲ್ಲಿ ಎಲ್ಲಾ ವಿಮಾನ ಕಾರ್ಯಾಚರಣೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಯಿತು. ಘಟನೆ ಬೆನ್ನಲ್ಲೇ ವಿಮಾನ ಸುರಕ್ಷತಾ ಪ್ರೋಟೋಕಾಲ್‌ಗಳನ್ನು ಅತ್ಯಂತ ಎಚ್ಚರಿಕೆಯಿಂದ ಅನುಸರಿಸಲಾಗುತ್ತಿದ್ದು, ಅಹಮದಾಬಾದ್ ವಿಮಾನ ನಿಲ್ದಾಣವು ಸಂಜೆ 4.05 ರಿಂದ ವಿಮಾನ ಕಾರ್ಯಾಚರಣೆಗಳಿಗೆ ಲಭ್ಯವಿರಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಈ ವಿಮಾನದಲ್ಲಿ ಇಬ್ಬರು ಮಕ್ಕಳು ಮತ್ತು 10 ಸಿಬ್ಬಂದಿ ಸೇರಿದಂತೆ 232 ಪ್ರಯಾಣಿಕರಿದ್ದರು ಎಂದು ವಾಯುಯಾನ ನಿಯಂತ್ರಕ, ನಾಗರಿಕ ವಿಮಾನಯಾನ ನಿರ್ದೇಶನಾಲಯ ಮಾಹಿತಿ ನೀಡಿದೆ.

ವಿಮಾನವು ಟೇಕ್ ಆದ ಐದು ನಿಮಿಷಗಳಲ್ಲೇ ವಸತಿ ಪ್ರದೇಶವಾದ ಮೇಘಾನಿ ನಗರದಲ್ಲಿ ಕುಸಿದು ಬಿದ್ದಿದೆ. ಪೈಲಟ್ ಇನ್ ಕಮಾಂಡ್ ಸುಮಿತ್ ಸಭರ್ವಾಲ್ ಮತ್ತು ಸಹ–ಪೈಲಟ್ ಕ್ಲೈವ್ ಕುಂದರ್ ಕಾಕ್‌ಪಿಟ್‌ನಲ್ಲಿದ್ದರು. ದೂರದಿಂದಲೇ ಹೊಗೆ ಸ್ಪಷ್ಟವಾಗಿ ಕಾಣಿಸಿಕೊಂಡಿತ್ತು ಎಂದು ಅದು ಹೇಳಿದೆ. ವಿಮಾನದಲ್ಲಿದ್ದ 230 ಪ್ರಯಾಣಿಕರ ಪೈಕಿ 169 ಭಾರತೀಯರು, 53 ಬ್ರಿಟಿಷ್ ಪ್ರಜೆಗಳು, 7 ಪೋರ್ಚುಗೀಸ್ ಪ್ರಜೆಗಳು ಮತ್ತು ಓರ್ವ ಕೆನಡಾ ಇದ್ದರು. ಬದುಕುಳಿದ ಏಕೈಕ ವ್ಯಕ್ತಿ ಭಾರತೀಯ ಮೂಲದ ಬ್ರಿಟಿಷ್ ಪ್ರಜೆಯಾಗಿದ್ದಾರೆ ಎಂದು ಏರ್ ಇಂಡಿಯಾ ಖಚಿತಪಡಿಸಿದೆ.

# ಕಲ್ಯಾಣ ಕರ್ನಾಟಕ ಹೆಲ್ತ್ ಹಬ್ ಆಗಲು ಆರೋಗ್ಯ ಸೇವೆ ಬಲವರ್ಧನೆ:ಇಂದು ಆರೋಗ್ಯ ಆವಿಷ್ಕಾರಕ್ಕೆ ಸಿಎಂ ಶಂಕುಸ್ಥಾಪನೆ

**ಕಲಬುರಗಿ,ಜು.13:** ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ಮಾಣ ಮತ್ತು ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸುವ ಮಹತ್ವಾಕಾಂಕ್ಷಿ 440.68 ಕೋಟಿ ರೂ. ವೆಚ್ಚದ ಆರೋಗ್ಯ ಆವಿಷ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಬೆಳಗ್ಗೆ 11 ಗಂಟೆಗೆ ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶಂಕುಸ್ಥಾಪನೆ ನೆರವೇರಿಸುವರು.

ಕಲ್ಯಾಣ ಕರ್ನಾಟಕ ಜಿಲ್ಲಾ ಹಬ್ ನಿಟ್ಟಿನಲ್ಲಿ ವಿವಿಧ ಆರೋಗ್ಯ ಸೇವಾ ಬಲವರ್ಧನೆ ಕಾಮಗಾರಿಗಳಿಗೆ ರಾಜ್ಯಸಭಾ ವಿರೋಧ ಪಕ್ಷದ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಸಿಎಂ ಅಡಿಗಲ್ಲು ಸಮಾರಂಭ ನೆರವೇರಿಸುವರು. ಡಿಸಿಎಂ ಡಿ.ಕೆ ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಾಪುರ,ಆರೋಗ್ಯ ಸಚಿವ ದಿನೇಶ ಗುಂಡೂರಾವ್, ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ. ಸುಧಾಕರ, ಅವರು ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದ ಸಚಿವರು, ಗಣ್ಯರು ಪಾಲ್ಗೊಳ್ಳುವರು ಎಂದು ಕೆಕೆಆಡಿಬಿ ಅಧ್ಯಕ್ಷ ಡಾ.ಅಜಯಸಿಂಗ್ ಅವರು ಸುದ್ದಿಗಾರಿಗೆ ತಿಳಿಸಿದರು.

ಗುರುವಾರ ಸಂಜೆ ಇಲ್ಲಿನ ಮಂಡಳಿ ಸಭಾಂಗಣದಲ್ಲಿ ಬೆಂಗಳೂರಿನಿಂದಲೇ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಅವರು ,ಮುಖ್ಯಮಂತ್ರಿ ಅವರು ಬೆಂಗಳೂರಿನಿಂದ ವಿಮಾಣದ ಮೂಲಕ ಕಲಬುರಗಿಗೆ ಆಗಮಿಸಿ, ನಂತರ ಎಐಸಿಸಿ ಅಧ್ಯಕ್ಷ ಡಾ.ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಹೆಲಿಕ್ಯಾಪ್ಟರ್ ಮೂಲಕ ಯಾದಗಿರಿಗೆ ತೆರಳಲಿದ್ದು, ಇಂದು ತಾವು ಯಾದಗಿರಿಗೆ ಹೋಗಿ ಉಸ್ತುವಾರಿ ಸಚಿವ ದರ್ಶನಾಪುರ ಅವರೊಂದಿಗೆ ಸಭೆ ನಡೆಸಿ ಸಿದ್ಧತೆಗಳನ್ನು ಅವಲೋಕಿಸುತ್ತೇನೆ ಎಂದರು.

ಆರೋಗ್ಯ, ಆವಿಷ್ಕಾರ ಕಲ್ಯಾಣ ಕರ್ನಾಟಕ ಭಾಗದ 41 ವಿಧಾನಸಭೆ ಕ್ಷೇತ್ರಗಳಲ್ಲಿ ಕಳೆದ ಸೆಪ್ಟೆಂಬರ್ ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯಿಸಿದಂತೆ ಒಟ್ಟು 883ಕೋಟಿ ರೂ. ವೆಚ್ಚದಲ್ಲಿ, ಈಗ 416 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. 416ಕೋಟಿ ರೂ. ವೆಚ್ಚದಲ್ಲಿ 208ಕೋಟಿ ರೂ. ಕೆಕೆಆಡಿಜಿ ಅನುದಾನವಾಗಿದ್ದರೆ, ಉಳಿದರ್ಧ ಅನುದಾನ ಆರೋಗ್ಯ ಇಲಾಖೆಯದ್ದಾಗಿದೆ ಎಂದು ಹೇಳಿದರು

ಒಟ್ಟಾರೆ ಕಲ್ಯಾಣ ಕರ್ನಾಟಕ ಭಾಗದ ಆರೋಗ್ಯಕ್ಕೆ ಹೊಸಬೂಸ್ಟ್ ಸಿಗಲಿದೆ. ಇದು ಕಲ್ಯಾಣ ಕರ್ನಾಟಕ ಹೆಲ್ತ್ ಹಬ್ ಆಗಲು ಪೂರಕವಾಗಿದೆ. 24 ಪ್ರಾಥಮಿಕ ಆರೋಗ್ಯ ಕೇಂದ್ರಗಳು,7 ನಗರ ಆರೋಗ್ಯ ಕೇಂದ್ರಗಳು, 4 ನಗರ ಸಮುದಾಯ ಆರೋಗ್ಯ ಕೇಂದ್ರಗಳು, 30 ಹಾಸಿಗೆಗಳಿಂದ 50 ಹಾಸಿಗೆಗೆ ಮೇಲ್ದರ್ಜೆಗೆ ಏರಿಸುವ 25 ಸಮುದಾಯ ಆರೋಗ್ಯ ಕೇಂದ್ರಗಳು, ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 100 ಹಾಸಿಗೆ ಸಾಮರ್ಥ್ಯದ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸುವುದು, 6 ಸಮುದಾಯ ಆರೋಗ್ಯಕೇಂದ್ರವನ್ನು 30 ಹಾಸಿಗೆಗಳಿಂದ 100 ಹಾಸಿಗೆಗೆ ಮೇಲ್ದರ್ಜೆಗೆ ಏರಿಸುವುದು, 9 ತಾಲೂಕು ಆರೋಗ್ಯ ಕೇಂದ್ರವನ್ನು 100 ಹಾಸಿಗೆಗಳಿಂದ 150 ಹಾಸಿಗೆಗೆ ಮೇಲ್ದರ್ಜೆಗೆ, 2 ಉಪ ವಿಭಾಗೀಯ ಆಸ್ಪತ್ರೆ ಯನ್ನು ಜಿಲ್ಲಾ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸುವ ಯೋಜನೆಗಳು ಆರೋಗ್ಯ ಆವಿಷ್ಕಾರದಲ್ಲಿ ಸೇರಿವೆ. ಗ್ರಾಮೀಣ ಪ್ರದೇಶದಲ್ಲಿ ಪಿಎಚ್ ಸಿ, ಸಮುದಾಯ ಆರೋಗ್ಯ ಕೇಂದ್ರಗಳ ಸೇವೆ ಬಲಗೊಂಡರೆ ಹಳ್ಳಿ ಜನರ ಆರೋಗ್ಯ ಸುಧಾರಣೆಯಾಗಲಿದೆ. ಈ ಹಿನ್ನೆಲೆಯಲ್ಲಿ ದೊಡ್ಡ ಮಟ್ಟದ ಆರೋಗ್ಯ ಯೋಜನೆ ರೂಪಿಸಲಾಗಿದೆ ಎಂದರು.



**ರಾಯಚೂರಲ್ಲಿ ಪ್ರಜಾಸೌಧಕ್ಕೆ ಚಾಲನೆ:** ಇದೇ ಜೂನ್ 9ರಂದು ರಾಯಚೂರಿನಲ್ಲಿ ಪ್ರಜಾಸೌಧಕ್ಕೆ ಸಿಎಂ ಚಾಲನೆ ನೀಡುವವರಿದ್ದರು. ಆದರೆ ರದ್ದಾಗಿರುವ ಈ ಕಾರ್ಯಕ್ರಮ ಮಾಸಾಂತ್ಯದೊಳಗೆ ನಡೆಯಲಿದೆ. ಈ ಕುರಿತು ಸಿಎಂ ಜತೆ ಚರ್ಚಿಸಿ ದಿನಾಂಕ ನಿಗದಿ ಮಾಡಲಾಗುವುದು. ಪ್ರಮುಖವಾಗಿ ಕಲಬುರಗಿಯಲ್ಲಿ ಈಗಾಗಲೇ ಕಲ್ಯಾಣಪಥ ಉದ್ಘಾಟಿಸಲಾಗಿದ್ದು,

ಯಾದಗಿರಿಯಲ್ಲಿ 'ಆರೋಗ್ಯ ಆವಿಷ್ಕಾರ ಮತ್ತು ರಾಯಚೂರಲ್ಲಿ ಪ್ರಜಾಸೌಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅದೇ ರೀತಿಯಾಗಿ ಜುಲೈ ತಿಂಗಳಿನಲ್ಲಿ ಕೊಪ್ಪಳದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿನಿಲಯ ಹಾಗೂ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ಸಿಎಂ ಅವರೇ ಅಡಿಗಲ್ಲು ನೆರವೇರಿಸುವರು ಎಂದು ಡಾ. ಅಜಯಸಿಂಗ್ ಅವರು ವಿವರಿಸಿದರು.

ರಾಜ್ಯ ಸರ್ಕಾರ ನುಡಿದಂತೆ ನಡೆಯುತ್ತಿದ್ದು ಈಗಾಗಲೇ ಅರಣ್ಯ ಆವಿಷ್ಕಾರಕ್ಕೆ 100ಕೋಟಿ ರೂ. ನೀಡಲಾಗಿದ್ದು ಈಗ ಆರೋಗ್ಯ ಆವಿಷ್ಕಾರ, ಪ್ರಜಾಸೌಧಕ್ಕೆ ಚಾಲನೆ ನೀಡಲಾಗುತ್ತಿದೆ. ವೈದ್ಯಕೀಯ ಇಲಾಖೆಯೊಂದಿಗೆ ಕಲ್ಯಾಣಕರ್ನಾಟಕ ಭಾಗದಾದ್ಯಂತ ಆರೋಗ್ಯ ಸೇವಾ ಬಲವರ್ಧನೆಗೆ ಅಂದರೆ ಆಸ್ಪತ್ರೆ ಮೇಲ್ದರ್ಜೆಗೇರಿಸುವುದು, ಆಂಬ್ಯುಲೆನ್ಸ್ ಖರೀದಿ, ಪಾಟ್ ಲೈನ್ ಶುರು, ಡಯಾಲಿಸೆಸ್ ಸೇರಿದಂತೆ ಇತರ ಯಂತ್ರೋಪಕರಣಗಳಿಗೆ ಮಂಡಳಿಯಿಂದ ಅನುದಾನ ಕಲ್ಪಿಸಲಾಗುತ್ತದೆ.

# ಇರಾನ್ ಮೇಲೆ ಇಸ್ರೇಲ್ ದಾಳಿ ಗಗನ ಮುಟ್ಟಲಿದೆ ತೈಲಬೆಲೆ





**ನವದೆಹಲಿ, ಜೂ.13:** ಇರಾನ್ ದೇಶದ ಮೇಲೆ ಇಸ್ರೆಲ್ ಏಕಾಏಕಿ ದಾಳಿ ಮಾಡಿರುವುದು ಜಾಗತಿಕವಾಗಿ ಮಾರುಕಟ್ಟೆಗಳನ್ನು ಆತಂಕಕ್ಕೆ ದೂಡಿದೆ. ಮಾತ್ರವಲ್ಲ ಕಚ್ಚಾ ತೈಲ ಬೆಲೆ ಏರಿಕೆಯಾಗುವ ಸಾಧ್ಯತೆಗಳಿವೆ.

ಇಸ್ರೇಲ್ ದಾಳಿಯಿಂದಾಗಿ ಇಂದು ತೈಲ ಬೆಳೆ ಶೇ. 13ರಷ್ಟು ಏರಿಕೆ ಆಗಿದೆ. ಒಂದು ಬ್ಯಾರಲ್ ಕಚ್ಚಾ ತೈಲದ ಬೆಲೆ 76 ಡಾಲರ್ ಆಸುಪಾಸಿನಷ್ಟಿದೆ. ಇಸ್ರೆಲ್ ದಾಳಿ ಪರಿಣಾ ಮವಾಗಿ ಮಧ್ಯಪ್ರಾಚ್ಯ ದೇಶಗಳಿಂದ ತೈಲ ಸರಬರಾಜು ಕಡಿಮೆಗೊಳ್ಳುವ ಸಾಧ್ಯತೆ ಮನಗಂಡು ತೈಲ ಬೆಲೆ ಹೆಚ್ಚಳ ಆಗಿದೆ.

ಇದರ ಪರಿಣಾಮವಾಗಿ ಭಾರತವೂ ಒಳಗೊಂಡಂತೆ ಜಾಗತಿಕವಾಗಿ ಪೆಟ್ರೋಲ್ ಬೆಲೆಯೂ ಏರಿಕೆ ಆಗುವ ಸಾಧ್ಯತೆ ಇದೆ.ಯುಎಸ್ ಡಬ್ಲ್ಯುಟಿಐ ಕ್ರೂಡ್ ಒಂದು ಬ್ಯಾರಲ್‌ಗೆ ಶೇ. 11.38ರಷ್ಟು ಏರಿ 75.82 ಡಾಲರ್ ಮುಟ್ಟಿದೆ. ಬ್ರೆಂಟ್ ಕ್ರೂಡ್ ಇಂಡೆಕ್‌ನಲ್ಲಿ ಒಂದು ಬ್ಯಾರಲ್ ತೈಲದ ಬೆಲೆ 76.48 ಡಾಲರ್‌ಗೆ ಏರಿದೆ. ಇಸ್ರೆಲ್ ದಾಳಿಗೆ ಪ್ರತಿಯಾಗಿ ಇರಾನ್ ಕೂಡ ವಿವಿಧ ಕಾರ್ಯಾಚರಣೆ ಅಥವಾ ಕ್ರಮಗಳನ್ನು ಕೈಗೊಳ್ಳಬಹುದು. ತಜ್ಞರ ಪ್ರಕಾರ ಇರಾನ್ ನಿಯಂತ್ರಣದಲ್ಲಿರುವ ಹಾರ್ಮುಜ್ ಜಲಮಾರ್ಗವನ್ನು ಬಂದ್ ಮಾಡಬಹು ದು. ವಿಶ್ವದ ಶೇ. 25ರಷ್ಟು ತೈಲ ಸರಬ ರಾಜು ಇಲ್ಲಿಂದ ಸಾಗಿ ಹೋಗುತ್ತದೆ. ಪ ರ್ಯಾಯ ಮಾರ್ಗದಲ್ಲಿ ತೈಲ ಸಾಗಿಸಲು ಹೆಚ್ಚು ವೆಚ್ಚವಾಗಬಹುದು. ಇದೇ ರೀತಿ ಬಿಕ್ಕಟ್ಟು ಮುಂದುವರಿದರೆ ತೈಲ ಬೆಲೆ ಬ್ಯಾರಲ್‌ಗೆ 120 ರೂ ಮುಟ್ಟಿದರೂ ಅಚ್ಚ ರಿ ಇಲ್ಲ ಎನ್ನಲಾಗಿದೆ. ಅಂದರೆ, ಈಗಿರುವ ಬೆಲೆಗಿಂತ ಶೇ. 85ರಷ್ಟು ಏರಿಕೆ ಆಗುವ ಸಂಭಾವ್ಯತೆ ಇಲ್ಲದಿಲ್ಲ.ಪರಿಸ್ಥಿತಿ ಇದೇ ರೀತಿ ಇದ್ದಲ್ಲಿ ಮುಂದಿನ ದಿನಗಳಲ್ಲಿ ಭಾರತದಲ್ಲಿ ಪೆಟ್ರೋಲ್ ಮತ್ತು ಡೀಸಲ್ ಬೆಲೆ ತೀವ್ರವಾಗಿ ಏರಿಕೆ ಆಗುವ ನಿರೀಕ್ಷೆ ಇದೆ.

# ದೇಶದಲ್ಲೆ ಮೊದಲ ಬಾರಿಗೆ ಕೋಮು ಹಿಂಸೆ ನಿಗ್ರಹ ಪಡೆ ಲೋಕಾರ್ಪಣೆ

**ಮಂಗಳೂರು,ಜೂ.13–** ರಾಜ್ಯಸರ್ಕಾರದ ನೆಮ್ಮದಿ ಕೆಡಿಸಿದ್ದ ಇತ್ತಿಚಿನ ಸರಣಿ ಕೊಲೆಗಳು ಹಾಗೂ ಕೋಮು ಹಿಂಸಾಚಾರವನ್ನು ಹತ್ತಿಕ್ಕಲು ದೇಶದಲ್ಲೆ ಮೊದಲ ಬಾರಿಗೆ ಕರಾವಳಿ ಹಾಗೂ ಮಲೆನಾಡಿನ ಮೂರು ಜಿಲ್ಲೆಗಳಿಗೆ ಸೀಮಿತವಾಗಿ ಕೋಮು ಹಿಂಸೆ ನಿಗ್ರಹ ವಿಶೇಷ ಕಾರ್ಯಪಡೆಯನ್ನು ಗೃಹಸಚಿವ ಡಾ.ಜಿ. ಪರಮೇಶ್ವರ್ ಇಲ್ಲಿಂದು ಲೋಕಾರ್ಪಣೆ ಮಾಡಿದರು. ಶಾಂತಿಯ ಸಂಕೇತವಾದ ಪಾರಿವಾಳದ ಚಿಹ್ನೆಯನ್ನೊಳಗೊಂಡ ವಿಶೇಷ ಕಾರ್ಯಪಡೆ ಲಾಂಛನವನ್ನು ಹಾಗೂ ಕೈಪಿಡಿಯನ್ನು ಇದೇ ವೇಳೆ ಬಿಡುಗಡೆಗೊಳಿಸಲಾಯಿತು.

ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ವಿಧಾನಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ, ಐವಾನ್ ಡಿಸೋಜ, ಪುತ್ತೂರು ಕ್ಷೇತ್ರದ ಶಾಸಕ ಅಶೋಕ್ ರೈ, ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ತಾರಾನಾಥ್, ಕೊಂಕಣಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಜೋಕಿನ್, ಮಾಜಿ ಸಂಸದ ಅಜಯ್ ಸರ್ ನಾಯಕ್, ಮಾಜಿ ಸಚಿವ ವಿನಯ್‌ಕುಮಾರ್ ಸೊರಕೆ, ರಾಜ್ಯದ ಪೊಲೀಸ್ ಮಹಾ ನಿರ್ದೇಶಕ ಎಂ.ಎ.ಸಲೀಂ, ಜಿಲ್ಲಾಧಿಕಾರಿ ಮುಲ್ಲೈಮುಹಿಲನ್, ಎಡಿಜಿಪಿ ಎಸ್.ಮುರುಘನ್, ಪಶ್ಚಿಮ ವಲಯ ಐಜಿಪಿ ಅಜಿತ್ ಸಿಂಗ್, ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್‌ರೆಡ್ಡಿ, ಮೂರು ಜಿಲ್ಲೆಗಳ ಎಸ್ಪಿಗಳು ಮತ್ತಿತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಇದೇ ವೇಳೆ ಮಾತನಾಡಿದ ಪರಮೇಶ್ವರ್ ಅವರು, ಆರು ತಿಂಗಳ ಹಿಂದೆ ಮಂಗಳೂರಿನಲ್ಲಿ ಒಂದು ಕೊಲೆಯಾಗಿತ್ತು. ಸ್ವಾಭಾವಿಕವಾಗಿ ಆತಂಕ, ಭಯದ ವಾತಾವರಣ ನಿರ್ಮಾಣವಾಗಿತ್ತು. ಆ ವೇಳೆ ಶಾಂತಿ ಸಹಬಾಳ್ವೆಯ ಪರಿಸ್ಥಿತಿಯನ್ನು ನಾನು ನೋಡಲೇ ಇಲ್ಲ. ರಾಜ್ಯದಲ್ಲಿ ಕಲೆ, ಸಂಸ್ಕೃತಿ, ಸಾಹಿತ್ಯ ಉಳಿದಿದ್ದರೆ ಅದಕ್ಕೆ ಕರಾವಳಿ ಜಿಲ್ಲೆಗಳ ಕೊಡುಗೆ ಅಪಾರವಾಗಿದೆ. ಇಲ್ಲಿನ ಕಾರ್ಯವೈಖರಿಯೇ ವಿಶೇಷವಾಗಿದೆ. ರಾಜ್ಯದಲ್ಲೆ ಮೊದಲ ಖಾಸಗಿ ವೈದ್ಯಕೀಯ ಕಾಲೇಜುಗಳು ಮಂಗಳೂರಿನಲ್ಲಿ ಆರಂಭಿಸಲಾಗಿತ್ತು. ನಾಡಿನ ಅಭಿವೃದ್ಧಿಯಲ್ಲೂ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯ ಕೊಡುಗೆ ಅಪಾರವಾಗಿದೆ ಎಂದರು.

ಈ ಹಿಂದೆ ಕೊಲೆಯಾಗಿದ್ದಾಗ ಇರುವ ಸಿಬ್ಬಂದಿಗಳನ್ನೆ ಬಳಸಿಕೊಂಡು ಆಗಿನ ಪೊಲೀಸ್ ಆಯುಕ್ತರು ವಿಶೇಷ ಕಾರ್ಯಪಡೆ ರಚನೆ ಮಾಡಿದ್ದರು. ಮಂಗಳೂರಿನಲ್ಲಿ ಸಾಮರಸ್ಯ ಹಾಳಾಗಿದೆ. ಇದನ್ನು ಬಾಯಿ ಮಾತಿನಲ್ಲಿ ಸರಿಪಡಿಸಲು ಸಾಧ್ಯವಿಲ್ಲ ಎಂಬ ಕಾರಣಕ್ಕೆ ವಿಶೇಷ ಕಾರ್ಯಪಡೆ ರಚಿಸುವ ನಿರ್ಧಾರ ತೆಗೆದುಕೊಳ್ಳಬೇಕಾಯಿತು ಎಂದು ಹೇಳಿದರು.

ರಾಜ್ಯದಲ್ಲಿ ನಕ್ಸಲ್ ಚಟುವಟಿಕೆ ನಿಂತು ಹೋಗಿವೆ. ಹೀಗಾಗಿ ಅದಕ್ಕಾಗಿ ರಚನೆಯಾಗಿದ್ದ ವಿಶೇಷ ಕಾರ್ಯಪಡೆ ರದ್ದುಗೊಳಿಸಲು ಚರ್ಚೆಯಾಗುತ್ತಿತ್ತು. ಆ ಪಡೆಯಲ್ಲಿ ಕೆಲಸ ಮಾಡಿದವರಿಗೆ ಯುದ್ಧ ಕೌಶಲ್ಯ ಹಾಗೂ ಮಾಹಿತಿ ಸಂಗ್ರಹ ಸೇರಿದಂತೆ ಹಲವು ರೀತಿಯ ತರಬೇತಿಗಳನ್ನು ನೀಡಲಾಗಿತ್ತು. ಅದನ್ನು ಬಳಸಿಕೊಂಡು ಕೋಮು ಹಿಂಸೆ ನಿಗ್ರಹ ಪಡೆ ರಚಿಸಲು ನಿರ್ಧರಿಸಲಾಯಿತು. ಇದು ದೇಶದಲ್ಲೆ ಮೊದಲ ಉಪಕ್ರಮ ಎಂದರು.

ಕೋಮುವಾದ ವಿಚಾರಧಾರೆಗಳನ್ನು ಪ್ರಚೋದಿಸುವುದು, ದ್ವೇಷದ ಭಾಷಣ ಮಾಡಿ ಸಮಾಜದಲ್ಲಿ ಸಾಮರಸ್ಯ ಹಾಳು ಮಾಡುವುದು, ಕಲುಷಿತ ವಾತಾವರಣ ನಿರ್ಮಿಸಿ ಸಹೋದರತ್ವ ಹಾಳು ಮಾಡುವ ವ್ಯಕ್ತಿಗಳು ಹಾಗೂ ಸಂಘಟನೆಗಳನ್ನು ಹತ್ತಿಕ್ಕುವ ಅಧಿಕಾರವನ್ನು ವಿಶೇಷ ಪಡೆಗೆ ನೀಡಲಾಗುವುದು. ಇವರಿಗೆ ಬೇರೆ ಯಾವುದೇ ಕೆಲಸ ಇಲ್ಲ. ಶಾಂತಿ ಕಾಪಾಡುವುದು ಪ್ರಮುಖ ಧ್ಯೇಯ ಎಂದರು. ಈ ಕಾರ್ಯಪಡೆ ಯಶಸ್ವಿಯಾಗಲಿದೆ ಎಂಬ ವಿಶ್ವಾಸ ತಮಗಿದೆ. ಈವರೆಗೂ ಒಳ್ಳೊಳ್ಳೆಯ ಮಾತುಗಳನ್ನಾಡಿ ಮೃದು ಧೋರಣೆಯಲ್ಲಿ ತಿಳಿ ಹೇಳುವ ಪ್ರಯತ್ನ ಮಾಡಿದ್ದೆವು. ಅದು ಅವರಿಗೆ ಮನವರಿಕೆಯಾಗಿಲ್ಲ. ಹೀಗಾಗಿ ಬಲ ಪ್ರಯೋಗ ಅನಿವಾರ್ಯವಾಗಿದೆ. ಮಂಗಳೂರಿನ ಜನ ಈ ಪಡೆಗೆ ಹೆಚ್ಚಿನ ಕೆಲಸ ಕೊಡದಂತೆ ಸ್ವಯಂ ಪ್ರೇರಿತವಾಗಿ ಸೌಹಾರ್ದತೆ ಕಾಪಾಡಿಕೊಳ್ಳಿ ಎಂದು ಸಲಹೆ ನೀಡಿದರು. ಒಂದು ವೇಳೆ ನಿಮ ಪ್ರವೃತ್ತಿಯನ್ನು ಮುಂದುವರೆಸಿದರೆ ಕಾರ್ಯಪಡೆಯ ಕೆಲಸದೊತ್ತಡ ಹೆಚ್ಚಾಗುತ್ತದೆ. ಶಾಂತಿ ಮರುಸ್ಥಾಪನೆಗೆ ಎಲ್ಲರ ಸಹಕಾರ ಬೇಕು. 2023 ರ ವಿಧಾನಸಭೆ ಚುನಾವಣೆಗೆ ಪ್ರಣಾಳಿಕೆ ಸಿದ್ಧಗೊಳಿಸುವಾಗ ತಾವು ಮಂಗಳೂರಿಗೆ ಬಂದು ವಿವಿಧ ಸಂಘಟನೆಗಳ ಜೊತೆ ಚರ್ಚೆ ನಡೆಸಿದ್ದು, ಕಾನೂನು ಸುವ್ಯವಸ್ಥೆ ಕಾರಣಕ್ಕೆ ಬಂಡವಾಳ ಹೂಡಿಕೆ ಮಾಡಲು ಹಿಂದೇಟು ಹಾಕುವಂತಹ ವಾತಾವರಣವಿದೆ. ಮಕ್ಕಳನ್ನು ಇಲ್ಲಿ ಓದಿಸಲಾಗುತ್ತಿಲ್ಲ. ಬೆಂಗಳೂರಿಗೆ ಕಳುಹಿಸಬೇಕಾದ ಪರಿಸ್ಥಿತಿಯಿದೆ. ಇಲ್ಲಿ ಶಾಂತಿಪಾಲನೆಗೆ ಆದ್ಯತೆ ನೀಡಿ ಎಂದು ಜನ ಮನವಿ ಮಾಡಿದರು ಎಂದು ಹೇಳಿದರು.



ಈ ಪಡೆಯ ಬಗ್ಗೆ ಅನೇಕ ಜನ ಟೀಕೆ ಮಾಡುತ್ತಾರೆ. ಪಡೆಯ ಅಗತ್ಯವಿತ್ತು. ಕರಾವಳಿಯಲ್ಲಿ ಶಾಂತಿ ನೆಲೆಸಿದರೆ ರಾಜ್ಯದಲ್ಲೂ ಶಾಂತಿಯ ವಾತಾವರಣ ಇರುತ್ತದೆ. ಅಗತ್ಯಬಿದ್ದರೆ ವಿಶೇಷಪಡೆಯ ಸಂಖ್ಯೆಯನ್ನು ಹೆಚ್ಚು ಮಾಡಲಾಗುವುದು ಎಂದು ತಿಳಿಸಿದರು. ಧರ್ಮ ಹಾಗೂ ಜಾತಿಯ ಹೆಸರಿನಲ್ಲಿ ಬೇದಭಾವ ಹಾಗೂ ಹಿಂಸೆ ಮಾಡುವವರು ಸಂವಿಧಾನ ವಿರೋಧಿಗಳು.

ಇದನ್ನು ತಮ ಸರ್ಕಾರ ಸಹಿಸು ವುದಿಲ್ಲ. ಅಗತ್ಯಬಿದ್ದರೆ ಈ ಕಾರ್ಯಪಡೆಯನ್ನು ರಾಜ್ಯಾದ್ಯಂತ ವಿಸ್ತರಿಸಲು ತಮ ಸರ್ಕಾರ ಸಿದ್ಧವಿದೆ ಎಂದು ಇದೇ ವೇಳೆ ಪ್ರಕಟಿಸಿದರು. ಬೇರೆಬೇರೆ ಜಿಲ್ಲೆಗಳಲ್ಲಿ ಅಂತಹ ಪರಿಸ್ಥಿತಿ ಉದ್ಭವಿಸುವುದಿಲ್ಲ, ವಿಸ್ತರಿಸುವ ಅಗತ್ಯ ಇರುವುದಿಲ್ಲ ಎಂಬ ವಿಶ್ವಾಸವಿದೆ ಎಂದರು.

ಯುವ ಮಾರ್ಗ



## ವ್ಯಕ್ತಿ ಕಾಣೆ ಪತ್ತೆಗೆ ಮನವಿ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.13–**ಪಟ್ಟಣದ ಬಸವ ನಗರದ ನಿವಾಸಿ ಹಾಗೂ ವ್ಯಾಪಾರಿ ಜಿ.ಶಿವರಾಮಕೃಷ್ಣ ವ.39 ವರ್ಷ ಇವರು ಕುಟುಂಬ ಕಲಹದಿಂದಾಗಿ ಜೂ.1 ರಂದು ಮನೆಯಲ್ಲಿನ ಕಾರಿನೊಂದಿಗೆ ಹೋರಾಟಿದ್ದು ಇದುವರೆಗೂ ಮನೆಗೆ ವಾಪಸಗಾದೆ ಇರುವುದರಿಂದ ಮಾನ್ವಿ ಪೊಲೀಸ್ ಠಾಣೆಯಲ್ಲಿ ಜೂ.3 ರಂದು ತಂದೆ ಜಿ.ವಿ.ವಿ.ಎಸ್.ಸತ್ಯನಾರಾಯಣ ಇವರು ನೀಡಿದ ದೂರನ್ನು ದಾಖಲಿಸಿಕೊಳ್ಳಲಾಗಿದ್ದು ಕಾಣೆಯಾದ ವ್ಯಕ್ತಿಯ ಕುರಿತು ಯಾರಿಗದರು ಮಾಹಿತಿ ದೊರೆತ್ತಲ್ಲಿ ಮಾನ್ವಿ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು,ಜೂ.13–** ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ ದಿಂದ 2025ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಅವಿಕ್ಷಾರಗಳನ್ನ ಮಾಡಿ ಉತ್ತಮ ಸಾಧನೆ ಮಾಡಿದ ಮಕ್ಕಳು, ಇಲಾಖೆಯ ವೆಬ್‌ಸೈಟ್ ವಿಳಾಸ: http://awards.gov.in ನಲ್ಲಿ ಜುಲೈ 31ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಚೇರಿಗೆ ಕಚೇರಿಯ ಸಮಯದಲ್ಲಿ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ ಗ್ರಾಮೀಣ: ಇಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜೂ.13–**ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ–ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 14ರ ಮಧ್ಯಾಹ್ನ 12 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕ ವಿನಯ್ ಕುಲಕರ್ಣಿ ಕೋರ್ಟ್‌ಗೆ ಶರಣಾಗತಿ ಸಿಬಿಐ ವಶಕ್ಕೆ



**ಬೆಂಗಳೂರು,ಜೂ.13–** ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಯೋಗೀಶ್ ಗೌಡ ಹತ್ಯೆ ಪ್ರಕರಣದ ಆರೋಪಿ ಮಾಜಿ ಸಚಿವ ಹಾಗೂ ಶಾಸಕ ವಿನಯ್ ಕುಲಕರ್ಣಿ ಇಂದು ನ್ಯಾಯಾಲಯದ ಮುಂದೆ ಶರಣಾಗಿದ್ದಾರೆ. ಸುಪ್ರೀಂ ಕೋರ್ಟ್ ಜಾಮೀನು ರದ್ದುಪಡಿಸಿ, ಒಂದು ವಾರದೊಳಗೆ ನ್ಯಾಯಾಲಯದ ಮುಂದೆ ಹಾಜರಾಗುವಂತೆ ಸೂಚಿಸಿತ್ತು.

ಈ ಹಿನ್ನೆಲೆಯಲ್ಲಿ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಹಾಜರಾಗಿದ್ದು, ಕೋರ್ಟ್ ಅವರನ್ನು ಸಿಬಿಐ ವಶಕ್ಕೆ ನೀಡಿ ಆದೇಶ ಹೊರಡಿಸಿದೆ.

ಕಳೆದ 2016 ರ ಜೂ. 15 ರಂದು ಧಾರವಾಡ ತಾಲೂಕಿನ ಹೆಬ್ಬಳ್ಳಿ ಕ್ಷೇತ್ರದ ಜಿಲ್ಲಾ ಪಂಚಾಯತಿ ಸದಸ್ಯನಾಗಿದ್ದ ಯೋಗೀಶಗೌಡನನ್ನು ಅವರದ್ದೇ ಮಾಲೀಕತ್ವದ ಜಿಮ್‌ನಲ್ಲಿ ಭೀಕರವಾಗಿ ಹತ್ಯೆಗೈಯ್ಯಲಾಗಿತ್ತು.

ಇದರಲ್ಲಿ ಮಾಜಿ ಸಚಿವ ಹಾಗೂ ಹಾಲಿ ಕಾಂಗ್ರೆಸ್ ಶಾಸಕ ವಿನಯ ಕುಲಕರ್ಣಿ ಕೈವಾಡ ಇದೆ ಎಂದು ಆರೋಪಿಸಿ, ಅವರನ್ನು 2020 ನವೆಂಬರ್ 5 ರಂದು ಸಿಬಿಐ ಬಂಧಿಸಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಇತ್ತೀಚೆಗೆ ಸುಪ್ರೀಂಕೋರ್ಟ್ ವಿನಯ್ ಕುಲಕರ್ಣಿ ಜಾಮೀನು ರದ್ದುಗೊಳಿಸಿ ಆದೇಶಿಸಿತ್ತು.

**ಸೇವೆ ಜನರ ಮನದಲ್ಲಿದೆ:** ಇನ್ನು ಇತ್ತೀಚೆಗೆ ಧಾರವಾಡದ ಸಮೀಪದ ಬೆಳಗಾವಿ ಜಿಲ್ಲೆಯ ಕಿತ್ತೂರಿನ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ಮಾಡಿದ್ದ ವಿನಯ್ ಕುಲಕರ್ಣಿ, ಇಷ್ಟು ವರ್ಷಗಳ ಕಾಲ ಕ್ಷೇತ್ರಕ್ಕಾಗಿ ನಾನು ಮಾಡಿದ ಕೆಲಸ ಹಾಗೂ ನೀಡಿದ ಸೇವೆ ಜನರ ಮನದಲ್ಲಿದೆ.

ಇದರಿಂದಲೇ ಕ್ಷೇತ್ರದ ಹೊರಗಿದ್ದರೂ ನಾನು ಶಾಸಕನಾಗಿದ್ದೇನೆ. ಕಳೆದ ಐದು ವರ್ಷಗಳಿಂದ ಕ್ಷೇತ್ರದ ಹೊರಗಿದ್ದರೂ ಜನರು ನನ್ನನ್ನು ಭೇಟಿಯಾಗಲು ಹಾತೊರೆಯುತ್ತಾರೆ. ಪ್ರಕರಣದಲ್ಲಿ ಜಾಮೀನು ರದ್ದಾಗಿರುವ ಹಿನ್ನೆಲೆಯಲ್ಲಿ ನನಗೆ ಕಷ್ಟ ಬಂದಿರಬಹುದು. ಆದರೆ, ಕ್ಷೇತ್ರದ ಅಭಿವೃದ್ಧಿ ಕುಂಠಿತ ಆಗದಂತೆ ಎಚ್ಚರ ವಹಿಸಿದ್ದೇನೆ ಎಂದು ಭಾವುಕರಾಗಿ ನುಡಿದ್ದರು.

## ಭಕ್ತಾಧಿಗಳಿಂದ ಪವಿತ್ರ ತೀರ್ಥ ಕ್ಷೇತ್ರಗಳ ಜ್ಯೋತಿರ್ಲಿಂಗಗಳ ದರ್ಶನ ಪ್ರವಾಸ

**ಯುವ ಮಾರ್ಗ ಸುದ್ದಿ**

**ಅರಕೇರಾ,ಜೂ.13–**ಹಿಂದೂ ಪುರಾಣ ಹೇಳುವ ಪ್ರಕಾರ ಜ್ಯೋತಿರ್ಲಿಂಗಗಳಿರುವ 12 ಸ್ಥಳಗಳಲ್ಲಿ ಶಿವನು ತನ್ನ ಭಕ್ತರಿಗೆ ವರವನ್ನು ನೀಡಲು ಅವತಾರ ಪ್ರಕಾರ ಜ್ಯೋತಿರ್ಲಿಂಗಗಳ ಇದ್ದು ಶುಕ್ರವಾರ ಅರಕೇರಾ ಪಟ್ಟಣದ ಭಕ್ತಾಧಿಗಳು ಪವಿತ್ರ ತೀರ್ಥಕ್ಷೇತ್ರಗಳು ಹಾಗೂ ಜ್ಯೋತಿರ್ಲಿಂಗಗಳ ದರ್ಶನಕ್ಕೆ ಪ್ರವಾಸ ಕೈಗೊಂಡರು.

ಶುಕ್ರವಾರ ಮುಂಜಾನೆ ಶ್ರೀಸೂಗೂರೇಶ್ವರ ದೇವಸ್ಥಾನದಲ್ಲಿ ವಿಶೇಷಪೂಜೆ ಸಲ್ಲಿಸಿದ ಭಕ್ತಾಧಿಗಳು ಸುಮಾರು 30



ಕ್ಕೂಹೆಚ್ಚು ಭಕ್ತಾಧಿಗಳು ಪ್ರವಾಸಕೈಗೊಂಡರು ಗುಜರಾತ್ ರಾಜ್ಯದ ಪ್ರಮುಖ ಜ್ಯೋತಿರ್ಲಿಂಗ ಸೋಮನಾಥ,ನಾಗೇಶ್ವರ, ಹಾಗೂ ದೇವಾಲಯಗಳು ಮಹಾರಾಷ್ಟ್ರ ಜ್ಯೋತಿರ್ಲಿಂಗ ಶಿವನಿಗೆ ಸಮರ್ಪಿತವಾದ ಪಂಚ ಜ್ಯೋತಿರ್ಲಿಂಗಗಳು,ಬೀಮಾಶಂಕರ, ತ್ರಯಂಬಕೇಶ್ವರ, ಗ್ರಿಷ್ಣೇಶ್ವರ, ಔಂಧನಾಗನಾಥ,ಪರ್ಲಿವೈನಾಥ ಮಧ್ಯಪ್ರದೇಶ ಎರಡು ಜ್ಯೋತಿರ್ಲಿಂಗಗಳು ಮಹಾಕಾಲೇಶ್ವರ ಮತ್ತು ಓಂಕಾರೇಶ್ವರ ಹಾಗೂ ದೇವಾಲಯ ದರ್ಶನಪಡೆಯಲು ಅರಕೇರಾ ಪಟ್ಟಣದ ಭಕ್ತಾಧಿಗಳು ಖಾಸಗಿ ವಾಹನದದಲ್ಲಿ ಮೃತುಂಜಯ್ಯಸ್ವಾಮಿ ಹಿರೇಮಠ, ಗಂಗಯ್ಯಸ್ವಾಮಿ,ರಾಚಯ್ಯಸ್ವಾಮಿ ಮಠಪತಿಯವರ ನೇತೃತ್ವದಲ್ಲಿ ಶುಕ್ರವಾರ ಬೆಳಿಗ್ಗೆ ಜ್ಯೋತಿರ್ಲಿಂಗಗಳ ದರ್ಶನಕ್ಕೆ ತರೆಳಿದರು.

## ನಾಳೆ ಮಹಾರಾಣಾ ಪ್ರತಾಪ ಸಿಂಹ ಜಯಂತಿ : ದುರ್ಗಾಸಿಂಗ್

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.13–** ತಾಲೂಕ ರಜಪೂತ ಸಮಾಜದಿಂದ ವೀರ ಪುರುಷ ಮಹಾರಾಣಾ ಪ್ರತಾಪ ಸಿಂಹ ಜಯಂತಿಯನ್ನು ಇದೇ 15ರಂದು ಭಾನುವಾರ ಪಟ್ಟಣದ ಸಾಂಸ್ಕೃತಿಕ ಭವನದಲ್ಲಿ ಆಚರಣೆ ಮಾಡಲಾಗುವುದೆಂದು ರಜಪೂತ ಸಮಾಜದ ಕಾರ್ಯಾಧ್ಯಕ್ಷ ದುರ್ಗಾಸಿಂಗ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪಟ್ಟಣದ ದೊಡ್ಡ ಹನುಮಂತ




ದೇವಸ್ಥಾನದಿಂದ ಬೆಳಗ್ಗೆ 9 ಗಂಟೆಗೆ ಮಹಾರಾಣಾ ಪ್ರತಾಪ ಸಿಂಹರ ಭಾವಚಿತ್ರದ ಮೆರವಣಿಗೆ ಮಾಡಲಾಗುವುದು. ಸಮಾರಂಭದಲ್ಲಿ ಶಾಸಕ ಮಾನಪ್ಪ ವಜ್ಜಲ್, ವಿಧಾನ ಪರಿಷತ್ ಸದಸ್ಯ ಶರಣಗೌಡ ಬಯ್ಯಾಪುರ, ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು, ಮಹಿಳಾ ಘಟಕದ ಅಧ್ಯಕ್ಷೆ ರೇಖಾಬಾಯಿ ದಶರಥ ಸಿಂಗ್, ವಿಶೇಷ ಉಪನ್ಯಾಸವನ್ನು ಪ್ರೇಮಸಿಂಗ್ ಹಾಗೂ ದಶರಥ ಸಿಂಗ್ ನೀಡಲಿದ್ದಾರೆ. ಇದರ ಜೊತೆಗೆ 10 ಹಾಗೂ 12ನೇ ತರಗತಿಯಲ್ಲಿ ಹೆಚ್ಚಿನ ಅಂಕಪಡೆದ ರಜಪೂತ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುವುದೆಂದು ಹೇಳಿದರು. ಈ ಸಂದರ್ಭದಲ್ಲಿ ಸುಧೀರ ಸಿಂಗ್, ದಶರಥ ಸಿಂಗ್, ಸುಭಾಸ್ ಸಿಂಗ್, ಶಿವರಾಜ ಸಿಂಗ್ ಇದ್ದರು.

## ದೈಹಿಕ ಮಾನಸಿಕ ಸದೃಢ ಆರೋಗ್ಯಕ್ಕೆ ಡ್ಯಾನ್ಸ್ ಸಹಕಾರಿ : ಡಾ.ರಂಗನಾಥ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.13–** ದೈಹಿಕ, ಮಾನಸಿಕ ಸದೃಢ ಆರೋಗ್ಯಕ್ಕೆ ಡಾನ್ಸ್ ಸಹಕಾರಿ. ಬಾಲ್ಯದಿಂದಲೇ ಅಭ್ಯಾಸ ರೂಢಿಸಿಕೊಂಡರೆ ಮನುಷ್ಯನ ಬುದ್ಧಿ ಮತ್ತೆಯೂ ಚುರುಕಾಗಿರುತ್ತದೆ ಎಂದು ಹೆರಿಗೆ ತಜ್ಞ ಡಾ. ರಂಗನಾಥ ಅಭಿಪ್ರಾಯಪಟ್ಟರು.

ಪಟ್ಟಣದ ತಾಲ್ಲೂಕು ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಎವಿ ಡಾನ್ಸ್ ಸ್ಟುಡಿಯೋದ ದಶಮಾನೋತ್ಸವ ಸಮಾರಂಭ



ದಲ್ಲಿ ಅದ್ದೂರಿಯಾದ ನೃತ್ಯ ಪ್ರದರ್ಶನ ಮಾಡಲಾಯಿತು. ಪುಟ್ಟ ಮಕ್ಕಳು, ಯುವಕರು ಒಟ್ಟುಗೂಡಿ ಮಾಸ್ಟರ್ ಅಭಿವರ್ಧನ್ ನಿರ್ದೇಶನದಲ್ಲಿ ಮಾಡಿದ ವಿಶೇಷ ಭಂಗಿಯ ಡಾನ್ಸ್ ಪ್ರೇಕ್ಷಕರ ಕಣ್ಮನ ಸೆಳೆಯಿತು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕ, ಎಸ್.ಯು.ಬಿ.ಟಿ. ಶಿಕ್ಷಣ ಟ್ರಸ್ಟ್ ಅಧ್ಯಕ್ಷ ಸಂಜೀವ ಕುಮಾರ ಕಂದಗಲ್, ಮುಖಂಡರಾದ ಜಯಶ್ರೀ ಅಬ್ರಹಾಂ, ದೇವೇಂದ್ರ ಗುತ್ತೇದಾರ್, ಶ್ರೀಧರ್ ಕಿರಗಿ, ಪ್ರಕಾಶ್ ಚೇತನ್ ಸೌಂಡ್, ಗಂಗಮ್ಮ ಕಟ್ಟಿಮನಿ, ನಾಗರೆಡ್ಡಿ ರಾಠೋಡ್, ಶೋಭಾ ರವಿಕುಮಾರ್, ಪತ್ರಕರ್ತ ಶಿವರಾ ಜ್ ಕೆಂಭಾವಿ, ಚಂದ್ರಶೇಖರ ಹಿರೇಮಠ್, ರಾಜಶೇಖರ್ ಮೇದಾರ, ಮಾರುತಿ ಜಿಮ್ ಸೇರಿ ಇತರ 'ರು ಇದ್ದರು.

## ಬಸ್– ಲಾರಿ ಡಿಕ್ಕಿ: ಮಕ್ಕಳು ಸೇರಿ ನಾಲ್ವರ ಸಾವು

**ಬೆಂಗಳೂರು,ಜೂ.13–**ಮುಂದೆ ಹೋಗುತ್ತಿದ್ದ ಲಾರಿಯನ್ನು ಹಿಂದಿಕ್ಕುವ ಆತುರದಲ್ಲಿ ಆಂಧ್ರಪ್ರದೇಶ ಸಾರಿಗೆ ಬಸ್ ಡಿಕ್ಕಿ ಹೊಡೆದು ಸಂಭವಿಸಿದ ಭೀಕರ ಅಪಘಾತದಲ್ಲಿ ಇಬ್ಬರು ಮಕ್ಕಳು ಸೇರಿ ನಾಲ್ವರು ಮೃತಪಟ್ಟಿರುವ ದಾರುಣ ಘಟನೆ ಹೊಸಕೋಟೆ ತಾಲೂಕಿನ ಗೊಟ್ಟಿಪುರ ಗೇಟ್ ಬಳಿ ಇಂದು ಮುಂಜಾನೆ ಸಂಭವಿಸಿದೆ.

ಕೇಶವರೆಡ್ಡಿ (44), ತುಳಸಿ (21), ಪ್ರಣತಿ (4) ಹಾಗೂ 1 ವರ್ಷದ ಮಗು ಸಾವನ್ನಪ್ಪಿದ್ದು,ಅಪಘಾತದಲ್ಲಿ 16 ಮಂದಿ ಪ್ರಯಾಣಿಕರು ಗಾಯಗೊಂಡಿದ್ದು, ಅವರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದೆ.

ತಿರುಪತಿಯಿಂದ ಬೆಂಗಳೂರಿಗೆ ಆಂಧ್ರಪ್ರದೇಶದ ಸಾರಿಗೆ ಸಂಸ್ಥೆ ಬಸ್ ವೇಗವಾಗಿ ಬರುತ್ತಿದ್ದು, ಮಾರ್ಗ ಮಧ್ಯದಲ್ಲಿ ಮುಂಜಾನೆ ಗೊಟ್ಟಿಪುರ ಗೇಟ್ ಬಳಿ ಓವರ್‌ಟೇಕ್ ಮಾಡಲು ಮುಂದಾಗಿ, ಲಾರಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಬಸ್‌ನ ಮುಂಭಾಗ ಮತ್ತು ಒಂದು ಬದಿ ಸಂಪೂರ್ಣ ಜಖಂಗೊಂಡಿದೆ.

ಗಾಯಾಳುಗಳಿಗೆ ಹೊಸಕೋಟೆಯ ಸಿಲಿಕಾನ್ ಸಿಟಿ ಹಾಗೂ ಎಂವಿಜೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸ್ಥಳಕ್ಕೆ ಗ್ರಾಮಾಂತರ ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ. ಬಾಬಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಹೊಸಕೋಟೆ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಘಟನೆ ಸಂಬಂಧ ಮಾಧ್ಯಮದವರೊಂದಿಗೆ ಮಾತನಾಡಿದ ಪ್ರಯಾಣಿಕ ಮದನ್ ಮೋಹನ್ ರೆಡ್ಡಿ ನಾವು ಚಿತ್ತೂರಿನಲ್ಲಿ ಬಸ್ ಹತ್ತಿದೆವು. 9 ಗಂಟೆಗೆ ಬರಬೇಕಿದ್ದ ಬಸ್ 11 ಗಂಟೆಗೆ ಚಿತ್ತೂರಿಗೆ ಬಂತು. ಎಲ್ಲರೂ ಮಲಗಿದ್ದಾಗ ಮುಂಜಾನೆ ಸಮಯದಲ್ಲಿ ದೊಡ್ಡದ್ದಾಗಿ ಶಬ್ದ ಬಂತು. ಎಚ್ಚರಗೊಂಡು ನೋಡಿದಾಗ ಬಸ್ಸಿನ ಮೇಲ್ಭಾಗ ಸೇರಿದಂತೆ ಒಂದು ಬದಿ ಸಂಪೂರ್ಣ ಜಖಂಗೊಂಡಿತ್ತು. ನನ್ನ ಪತ್ನಿಯ ಕಾಲಿಗೂ ಗಾಯವಾಗಿದೆ. ತಕ್ಷಣವೇ ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುವ ಕೆಲಸ ಮಾಡಲಾಗಿತು" ಎಂದರು.

## ವ್ಯಾಕ್ತಿ ಕಾಣೆ ಪತ್ತೆಗೆ ಮನವಿ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.13–**ತಾಲೂಕಿನ ಕರೆಗುಡ್ಡ ಗ್ರಾಮದಿಂದ ಏ.9 ರಂದು ಸಂಜೆ 5 ಕ್ಕೆ ಮುಶಿಲೆಪ್ಪ 40 ವರ್ಷ ಗ್ರಾಮದ ತಮ್ಮ ಮನೆಯಿಂ ದ ಹೋರಗಡೆ ಹೋದವರು ಇದುವರೆಗೂ ಮನೆಗೆ ವಾಪಸಗಾದೆ ಇರುವುದರಿಂದ ಮಾನ್ವಿ ಪೊಲೀಸ್ ಠಾಣೆಯಲ್ಲಿ ಏ.25 ರಂದು ತಂದೆ ಪತ್ನಿ ಕವಿತಾ ನೀಡಿದ ದೂರನ್ನು ದಾಖಲಿಸಿಕೊಳ್ಳಲಾಗಿದ್ದು ಕಾಣೆಯಾದ ವ್ಯಕ್ತಿಯ ಕುರಿತು ಯಾರಿಗದರು ಮಾಹಿತಿ ದೊರೆತಲ್ಲಿ ಮಾನ್ವಿ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಪಿ.ಐ, ಸೋಮಶೇಖರ ಎಸ್.ಕೆಂಚರೆಡ್ಡಿ ಪ್ರಕಟಣೆಯಲ್ಲಿ ಕೋರಿದ್ದಾರೆ.

## ವಿವಿಧ ಹುದ್ದೆಗಳ ಭರ್ತಿಗೆ ನೇರ ಸಂದರ್ಶನ

**ರಾಯಚೂರು,ಜೂ.13–**ಕರ್ನಾಟಕ ಮಿದುಳಿನ ಆರೋಗ್ಯ ಉಪಕ್ರಮ ಕಾರ್ಯಕ್ರಮಯಡಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ವಿವಿಧ ಹುದ್ದೆಗಳ ಭರ್ತಿಗೆ ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ನೇರ ಸಂದರ್ಶನದಲ್ಲಿ ನ್ಯೂರಾಲಜಿಸ್ಟ್, ಫಿಸಿಸಿಯನ್, ವೈದ್ಯಕೀಯ ಅಧಿಕಾರಿ–01, ಶುಶ್ರೂಷಕರು–01, ಫಿಜಿಯೋಥೆರಪಿಸ್ಟ್–01, ಸ್ಪೀಚ್ ಥೆರಪಿಸ್ಟ್–01, ಕ್ಲಿನಿಕಲ್ ಸೈಕಾಲಜಿಸ್ಟ್–01, ಜಿಲ್ಲಾ ಸಂಯೋಜಕರು–01, ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ಜೂನ್ 25ರ ಬೆಳಿಗ್ಗೆ 10:30 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಗಳ ಕಚೇರಿಯ ಕಾರ್ಯಲಯದಲ್ಲಿ ನೇರ ಸಂದರ್ಶನ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕುಷ್ಠರೋಗ ನಿವಾರಣ ಅಧಿಕಾರಿಗಳ ಕಾರ್ಯಲಯ ವಿಭಾಗಕ್ಕೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ನಿ ಜತೆ ಜಗಳ: ನೇಣಿಗೆ ಶರಣಾದ ಪತಿ

**ಕಲಬುರಗಿ,ಜೂ.13–**ಪತ್ನಿ ಜೊತೆ ಜಗಳವಾಡಿದ ಪತಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಆಳಂದ ಚೆಕ್ ಪೋಸ್ಟ್ ಹತ್ತಿರ ಬಡಾವಣೆಯೊಂದರಲ್ಲಿ ಇಂದು ನಡೆದಿದೆ.

ಸಿದ್ರಾಮ ಢಗೆ (42) ಆತ್ಮಹತ್ಯೆ ಮಾಡಿಕೊಂಡವರು.

ಮೆಡಿಕಲ್ ರಿಪ್ರೆಸೆಂಟೆಟಿವ್ (ಎಂಆರ್) ಆಗಿ ಕೆಲಸ ಮಾಡುತ್ತಿದ್ದ ಸಿದ್ರಾಮ ಅವರು ಪತ್ನಿ ಜೊತೆಗೆ ಜಗಳವಾಡಿ ಮನೆಯಲ್ಲಿಯೇ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಸುದ್ದಿ ತಿಳಿದು ಚೌಕ್ ಪೊಲೀಸ್ ಠಾಣೆ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗ್ರಾಮಸಭೆಯಲ್ಲಿ ದೂರುಗಳ ಸುರಿಮಳೆ



**ಕೆಆರ್ ಪುರ,ಜೂ.13–** ಗ್ರಾಮ ಪಂಚಾಯತಿ ಸದಸ್ಯರನ್ನು ಗಣನೆಗೆ ತೆಗೆದುಕೊಳ್ಳದೆ ಕನ್ನಮಂಗಲ ಗ್ರಾಮ ಪಂಚಾಯತಿ ಅಧ್ಯಕ್ಷೆ ಹಾಗೂ ಅವರ ಪತಿ ಸರ್ವಾಧಿಕಾರಿಯಾಗಿ ನಡೆದು ಕೊಳ್ಳುತ್ತಿದ್ದಾರೆ ಎಂದು ಗ್ರಾ.ಪ ಸದಸ್ಯರು ದೂರಿದರು.

ಕನ್ನಮಂಗಲ ಗ್ರಾಮ ಪಂಚಾಯತಿ ವತಿಯಿಂದ ಆಯೋಜಿಸಿದ್ದ ಗ್ರಾಮ ಸಭೆಯಲ್ಲಿ ಶಾಸಕರ ಎದುರು ದೂರುಗಳ ಸುರಿಮಳೆಗೈದರು.

ಅಧಿಕಾರಿಗಳನ್ನು ಕೈ ಗೊಂಬೆ ಮಾಡಿಕೊಂಡು ಗ್ರಾಮ ಪಂಚಾಯಿತಿಯ ಕೋಟ್ಯಾಂತರ ರೂಪಾಯಿಯನ್ನು ದುರುಪಯೋಗ ಮಾಡಿದ್ದಾರೆ ಎಂದು ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ ಅವರಿಗೆ ಮನವಿ ಸಲ್ಲಿಸಿದರು.

ಏಳು ತಿಂಗಳಿನಿಂದಲ್ಲೂ ಸಭೆ ನಡೆಸಿಲ್ಲ. ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಲ್ಲಿ ಸಮರ್ಪಕವಾದ ರಸ್ತೆ, ಡಾಂಬರೀಕರಣವಾಗಿಲ್ಲ ಎಂದು ಸದಸ್ಯರು ಆರೋಪಿಸಿದರು.

ಅಧ್ಯಕ್ಷರು ಮಾಡಿರುವ ಹಗರಣಗಳ ಬಗ್ಗೆ ತನಿಖೆ ಮಾಡಿ ಕ್ರಮ ಕೈಗೊಳ್ಳಬೇಕು ಎಂದು ಶಾಸಕರನ್ನು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪಂಚಾಯತಿ ಸದಸ್ಯರಾದ ಯಲ್ಲಪ್ಪ,ಚೈತ್ರಾಯೋಗನಂದ್,ಸೋಮಶೇಖರ್ ಮತ್ತಿತರ ಸದಸ್ಯರು ಇಓ ಹಾಗೂ ಶಾಸಕರಿಗೆ ದೂರಿನ ಪ್ರತಿ ನೀಡಿದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**